ಸಂಪುಟ : 10 ಸಂಚಿಕೆ: 202 ಪುಟ : 4+2 ಬೆಲೆ: 3.00 ಶುಕ್ರವಾರ ಸೆಪ್ಟೆಂಬರ್ 19 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 202 Pages : 4+2 Price : 3.00 Friday September 19 2025 Gadag RNINo: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ನಾಳೆ ಗದಗ ಜಿಲ್ಲೆಗೆ ಸಿದ್ದರಾಮಯ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಸೆಪ್ಟೆಂಬರ್ 20 ರಂದು ಬೆಳಿಗ್ಗೆ 11.10 ಗಂಟೆಗೆ ಹುಬ್ಬಳ್ಳಿ ವಿಮಾನ ನಿಲ್ದಾಣದಿಂದ ಹೆಲಿಕಾಪ್ಟರ್ ಮೂಲಕ ಹೊರಟು ಬೆಳಿಗ್ಗೆ 11.25 ಗಂಟೆಗೆ ಗದಗ ಜಿಲ್ಲಾಧಿಕಾರಿಗಳ ಕಚೇರಿ ಆವರಣದ ಹೆಲಿಪ್ಯಾಡ್‌ಗೆ ಆಗಮಿಸುವರು. ನಂತರ ನಗರದ ಮುಳಗುಂದ ರಸ್ತೆಯ ಕನಕ ಭವನದ ಶ್ರೀ ರಾಕೇಶ್ ಸಿದ್ದರಾಮಯ್ಯ ಸಭಾಂಗಣದಲ್ಲಿ ಗದಗ ತಾಲೂಕು ಕುರುಬರ ಸಂಘ (ರಿ) ಗದಗ ವತಿಯಿಂದ ಆಯೋಜಿಸಿರುವ " ತಾಲೂಕು ಸಂಘದ ರಜತ ಮಹೋತ್ಸವ ಸವಿನೆನಪಿಗಾಗಿ ಸ್ಮರಣ ಸಂಚಿಕೆ ಬಿಡುಗಡೆ " ರಾಜ್ಯ ಮಟ್ಟದ ಕನಕೋತ್ಸವ ಹಾಗೂ ಸಂಘಜೀವಿ ಶ್ರೀ ಫಕೀರಪ್ಪ ಹೆಬಸೂರ ಅವರ ಅಭಿನಂದನಾ ಗ್ರಂಥ ಸಮರ್ಪಣೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಮಧ್ಯಾಹ್ನ 3.30 ಗಂಟೆಗೆ ಗದಗ ಜಿಲ್ಲಾಧಿಕಾರಿಗಳ ಕಚೇರಿ ಆವರಣ ಹೆಲಿಪ್ಯಾಡ್‌ದಿಂದ ಹೆಲಿಕಾಪ್ಟರ್ ಮುಖಾಂತರ ಹುಬ್ಬಳ್ಳಿಗೆ ಪ್ರಯಾಣಿಸಿ ನಂತರ ಬೆಂಗಳೂರಿಗೆ ಹೊರಡುವರು.

## ಪೂರ್ವಭಾವಿ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಅಕ್ಟೋಬರ್ 07-10-2025 ರಂದು ಮಹರ್ಷಿ ಶ್ರೀ ವಾಲ್ಮೀಕಿ ಜನ್ಮ ದಿನಾಚರಣೆಯನ್ನು ಆಚರಿಸುವ ಕುರಿತು ದಿ. 20/09/2025 ರಂದು ಮುಂಜಾನೆ 11-30 ಘಂಟೆಗೆ ಲಕ್ಷ್ಮೇಶ್ವರ ತಹಸಿಲ್ದಾರ್ ಇವರ ಕಾರ್ಯಾಲಯದಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ.

ಎಲ್ಲ ತಾಲೂಕ ಮಟ್ಟದ ಅಧಿಕಾರಿಗಳು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಮುಖಂಡರು, ದಲಿತಪರ ಸಂಘಟನೆಗಳ ಮುಖಂಡರು, ವಿವಿಧ ಸಂಘಟನೆಗಳ ಮುಖಂಡರು, ಸರ್ವ ಸದಸ್ಯರು, ಗಣ್ಯ ವ್ಯಕ್ತಿಗಳು, ಸಂಘ ಸಂಸ್ಥೆಯ ಪದಾಧಿಕಾರಿಗಳು ಮತ್ತು ಪತ್ರಿಕಾ ಮಾಧ್ಯಮದವರು ಹಾಗೂ ಸಾರ್ವಜನಿಕರು ಸಕಾಲಕ್ಕೆ ಆಗಮಿಸಿ ತಮ್ಮ ಅಮೂಲ್ಯ ಸಲಹೆ ಸೂಚನೆಗಳನ್ನು ನೀಡಲು ಕೋರಲಾಗಿದೆ.

## ನೀರು ಪೂರೈಕೆಗೆ ಟ್ಯಾಂಕರ್ ವ್ಯವಸ್ಥೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿನಗರಕ್ಕೆ ಕುಡಿಯುವ ನೀರು ಸರಬರಾಜು ಮಾಡುವ ಹಮ್ಮಿಗಿ ಬ್ಯಾರೇಜ್‌ನಲ್ಲಿ ವಿದ್ಯುತ್ ಸ್ಥಾವರಗಳು ದುರಸ್ತಿಗೆ ಬಂದಿದ್ದರಿಂದ ಸೆ.11ರಿಂದ ನೀರಿನ ಪೂರೈಕೆಯಲ್ಲಿ ವಿಳಂಬವಾಗಿರುತ್ತದೆ. ಡಂಬಳ ಪಂಪ್‌ಹೌಸ್‌ನಲ್ಲಿ ವಿದ್ಯುತ್ ಸ್ಥಾವರ ದುರಸ್ಥಿಯಾಗಿದ್ದು, ಪಾಪನಾಶಿ ನೀರು ಶುದ್ಧೀಕರಣ ಘಟಕದಲ್ಲಿಯೂ ಸೆ. 17ರಿಂದ ಮೋಟಾರ್‌ಗಳು ದುರಸ್ತಿಗೆ ಬಂದಿರುತ್ತದೆ. ಕಾರಣ ನೀರು ಪೂರೈಕೆಯಲ್ಲಿ ಒಂದು ವಾರ ವ್ಯತ್ಯಯ ಉಂಟಾಗಲಿದ್ದು, ಸಾರ್ವಜನಿಕರು ಸಹಕರಿಸಲು ವಿನಂತಿಸಿದೆ. ತಾತ್ಕಾಲಿಕವಾಗಿ ನೀರು ಸರಬರಾಜು ಮಾಡಲು ನೀರಿನ ಟ್ರ್ಯಾಕ್ಟರ್ ಟ್ಯಾಂಕರ್‌ಗಳ ವ್ಯವಸ್ಥೆಯನ್ನು ಕಲ್ಪಿಸಿದ್ದು, ನೀರಿನ ತೊಂದರೆ ಇದ್ದಲ್ಲಿ ಎಸ್.ಸಿ. ಹುಣಸಿಮರದ-ಕಿರಿಯ ಅಭಿಯಂತರರು-8088782451, ಸಿಂಧು ಜಿ-ಕಿರಿಯ ಅಭಿಯಂತರರು-8088498021, ಮಾರುತಿ ಭಜಂತ್ರಿ-9632751431 ಇವರಿಗೆ ಕರೆ ಮಾಡಿ ನೀರಿನ ಟ್ಯಾಂಕರ್‌ಗಳನ್ನು ಪಡೆಯಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

### ಸಿಎಂ ಸಿದ್ದರಾಮಯ್ಯ ಅವರ ಜಿಲ್ಲಾ ಪ್ರವಾಸದ ಪೂರ್ವಸಿದ್ಧತಾ ಸಭೆಯಲ್ಲಿ ಡಿಸಿ ಸಿ.ಎನ್. ಶ್ರೀಧರ್

# ವಹಿಸಿದ ಕಾರ್ಯವನ್ನು ವ್ಯವಸ್ಥಿತವಾಗಿ ನಿರ್ವಹಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೆಪ್ಟೆಂಬರ್ 20ರಂದು ಗದಗ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು, ಶಿಷ್ಟಾಚಾರದನ್ವಯ ನೋಡಲ್ ಅಧಿಕಾರಿಗಳನ್ನು ನಿಯಮಿಸಲಾಗಿದ್ದು, ಅಧಿಕಾರಿಗಳು ತಮಗೆ ವಹಿಸಿದ ಕಾರ್ಯವನ್ನು ವ್ಯವಸ್ಥಿತವಾಗಿ ನಿರ್ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಈ ಕುರಿತು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಹಮ್ಮಿಕೊಳ್ಳಲಾಗಿದ್ದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಹೆಲಿಪ್ಯಾಡ್ ಹಾಗೂ ಕಾರ್ಯಕ್ರಮ ನಡೆಯುವ ಸ್ಥಳದ ಹತ್ತಿರ ನುರಿತ ವೈದ್ಯರ/ಸಿಬ್ಬಂದಿ ತಂಡವನ್ನು ನಿಯೋಜಿಸುವುದು, ಸುಸಜ್ಜಿತ ಆಂಬುಲೆನ್ಸ್ ವ್ಯವಸ್ಥೆಗೆ ಕ್ರಮ ವಹಿಸುವುದು. ಮುಖ್ಯಮಂತ್ರಿಗಳು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳುವಾಗ ಜಿಲ್ಲೆಯಲ್ಲಿನ ರಸ್ತೆಗಳ ದುರಸ್ತಿಗೆ ಕ್ರಮ ವಹಿಸಬೇಕು. ವೇದಿಕೆ ಕಾರ್ಯಕ್ರಮದ ಸ್ಥಳವಾದ ಕನಕ ಭವನದ ಸುತ್ತಮುತ್ತಲಿನ ಆವರಣದ ಸ್ವಚ್ಛತೆಗೆ ಕ್ರಮ ವಹಿಸಬೇಕು. ಮುಖ್ಯಮಂತ್ರಿಗಳಿಗೆ ಸೂಕ್ತ ವಸತಿ ವ್ಯವಸ್ಥೆ ಕಲ್ಪಿಸಬೇಕು. ಮುಖ್ಯಮಂತ್ರಿಗಳ ಪ್ರವಾಸ ಕಾಲದಲ್ಲಿ ಸಾರಿಗೆ



ಸಂಚಾರದಲ್ಲಿ ತೊಂದರೆಯಾಗದಂತೆ ಕ್ರಮ ವಹಿಸಬೇಕು. ಮುಖ್ಯಮಂತ್ರಿಗಳ ಪ್ರವಾಸ ಮುಗಿಯುವವರೆಗೂ ಎಲ್ಲ ಇಲಾಖೆಯ ಅಧಿಕಾರಿಗಳು ಕಡ್ಡಾಯವಾಗಿ ಹಾಜರಿದ್ದು ತಮ್ಮ ತಮ್ಮ ಕರ್ತವ್ಯ ನಿರ್ವಹಿಸಬೇಕು. ಶಿಷ್ಟಾಚಾರದಲ್ಲಿ ಯಾವುದೇ ಲೋಪವಾಗದಂತೆ ನೋಡಿಕೊಳ್ಳಬೇಕೆಂದು ಸೂಚಿಸಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಮಾತನಾಡಿ, ಮುಖ್ಯಮಂತ್ರಿಗಳ ಪ್ರವಾಸ ಕಾರ್ಯಕ್ರಮದಲ್ಲಿ ಇಲಾಖೆಯಿಂದ ಸೂಕ್ತ ಬಂದೋಬಸ್ತ್‌ಗೆ ಕ್ರಮ ವಹಿಸಲಾಗುವುದು ಎಂದರು.

ಸಭೆಯಲ್ಲಿ ಅಗ್ನಿಶಾಮಕ ವಾಹನ, ವಿದ್ಯುತ್ ಪೂರೈಕೆ, ಊಟದ ವ್ಯವಸ್ಥೆ, ವಾಹನಗಳ ಪೂರೈಕೆ, ವೇದಿಕೆ ಸುರಕ್ಷತೆ ಸೇರಿದಂತೆ ವಿವಿಧ ವಿಷಯಗಳ ಕುರಿತು ಚರ್ಚಿಸಲಾಯಿತು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಮಹಾಂತೇಶ್ ಸಜ್ಜನರ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೊಟೂರ, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತ ರಾಜಾರಾಮ ಪವಾರ, ಸಂಖ್ಯಾ ಸಂಗ್ರಹಣಾಧಿಕಾರಿ ಕಂಬಾಳಿಮಠ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

ಮುಖ್ಯಮಂತ್ರಿಗಳು ಸೆ.20ರಂದು ಬೆಳಿಗ್ಗೆ 11.25ಕ್ಕೆ ಜಿಲ್ಲಾಧಿಕಾರಿಗಳ ಕಚೇರಿ ಆವರಣದ ಹೆಲಿಪ್ಯಾಡ್‌ಗೆ ಆಗಮಿಸುವರು. ನಂತರ ಅಲ್ಲಿಂದ ಗದಗ ತಾಲೂಕು ಕುರುಬರ ಸಂಘದ ವತಿಯಿಂದ ಆಯೋಜಿಸಿರುವ ತಾಲೂಕು ಸಂಘದ ರಜತ ಮಹೋತ್ಸವ ಸವಿನೆನಪಿಗಾಗಿ ಸ್ಮರಣ ಸಂಚಿಕೆ ಬಿಡುಗಡೆ, ರಾಜ್ಯ ಮಟ್ಟದ ಕನಕೋತ್ಸವ ಹಾಗೂ ಸಂಘಜೀವಿ ಶ್ರೀ ಫಕೀರಪ್ಪ ಹೆಬಸೂರ ಅವರ ಅಭಿನಂದನಾ ಗ್ರಂಥ ಸಮರ್ಪಣೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ನಂತರ ಶ್ರೀ ರಾಕೇಶ ಸಿದ್ಧರಾಮಯ್ಯ ಐಟಿಐ ಕಾಲೇಜು, ಅಲ್ಲಿಂದ ಜವಳ ಗಲ್ಲಿಯ ಇಂದಿರಾವನಕ್ಕೆ ಭೇಟಿ ನೀಡುವ ಕಾರ್ಯಕ್ರಮವಿದೆ. ನಂತರ ಮುಖ್ಯಮಂತ್ರಿಗಳು ಸಾರ್ವಜನಿಕರಿಂದ ಅಹವಾಲು ಸ್ವೀಕರಿಸುವ ಕಾರ್ಯಕ್ರಮವಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

### ಪತ್ರಿಕಾ ಗೋಷ್ಠಿಯಲ್ಲಿ ಶಾಸಕ ಜಿ.ಎಸ್. ಪಾಟೀಲ ಮಾಹಿತಿ

# ಸೆ.20ಕ್ಕೆ ಕುರುಬರ ಸಂಘದ ರಜತ ಮಹೋತ್ಸವ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ತಾಲೂಕು ಕುರುಬರ ಸಂಘದ ರಜತ ಮಹೋತ್ಸವ ಸಮಾರಂಭ ಸೆ. 20ರಂದು ನಡೆಯಲಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ ಎಂದು ರೋಣ ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಗುರುವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸೆ. 20ರಂದು ಬೆಳಿಗ್ಗೆ 11 ಗಂಟೆಗೆ ಕನಕ ಭವನದ ರಾಕೇಶ ಸಿದ್ದರಾಮಯ್ಯ ಸಭಾಂಗಣದಲ್ಲಿ ಕುರುಬರ ಸಂಘದ ರಜತ ಮಹೋತ್ಸವದ ಸ್ಮರಣ ಸಂಚಿಕೆ ಬಿಡುಗಡೆ, ರಾಜ್ಯಮಟ್ಟದ ಕನಕೋತ್ಸವ ಮತ್ತು ಸಂಘಜೀವಿ ಫಕೀರಪ್ಪ ಹೆಬಸೂರ ಅವರ ಅಭಿನಂದನಾ ಗ್ರಂಥ ಸಮರ್ಪಣೆ ಕಾರ್ಯಕ್ರಮಗಳು ನಡೆಯಲಿವೆ ಎಂದು ಮಾಹಿತಿ ನೀಡಿದರು.

ಅಭಿನಂದನಾ ಗ್ರಂಥವನ್ನು ಸಿಎಂ ಸಿದ್ದರಾಮಯ್ಯ ಬಿಡುಗಡೆಗೊಳಿಸಲಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವ




ಎಚ್.ಕೆ. ಪಾಟೀಲ ಸ್ಮರಣ ಸಂಚಿಕೆಯನ್ನು ಬಿಡುಗಡೆ ಮಾಡುವರು. ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ನಾಮಫಲಕ ಅನಾವರಣ ಮಾಡಲಿದ್ದು, ಗದಗ ತಾಲೂಕು ಕುರುಬರ ಸಂಘದ ಅಧ್ಯಕ್ಷ ಫಕೀರಪ್ಪ ಹೆಬಸೂರ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಗದಗ ತಾಲೂಕು ಕುರುಬರ ಸಂಘದ ಅಧ್ಯಕ್ಷ ಫಕೀರಪ್ಪ ಹೆಬಸೂರ, ಹಾಲುಮತ ಮಹಾಸಭಾದ ರಾಜ್ಯಾಧ್ಯಕ್ಷ ರುದ್ರಣ್ಣ ಗುಳಗುಳಿ, ಮಾಜಿ ಶಾಸಕ ಬಿ.ಆರ್. ಯಾವಗಲ್ಲ, ಜಿ.ಪಂ ಮಾಜಿ ಅಧ್ಯಕ್ಷ ವಾಸಪ್ಪ ಕುರುಡಗಿ ಹಾಗೂ ಕುರುಬ ಸಮಾಜದ ಹಿರಿಯರು, ವಿವಿಧ ಘಟಕಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಹಲವಾರು ಸಚಿವರು, ಶಾಸಕರು, ಸಂಸದರು, ವಿವಿಧ ನಿಗಮ ಮಂಡಳಿಗಳ ಅಧ್ಯಕ್ಷರು ಭಾಗವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ, ಕಾರ್ಮಿಕ ಸಚಿವ ಸಂತೋಷ ಲಾಡ್, ಕರ್ನಾಟಕ ರಾಜ್ಯ ಪಂಚ ಯೋಜನಾ ಗ್ಯಾರಂಟಿ ಅನುಷ್ಠಾನ ಸಮಿತಿಯ ರಾಜ್ಯಾಧ್ಯಕ್ಷ ಎಚ್.ಎಮ್. ರೇವಣ್ಣ, ವಿಧಾನ ಪರಿಷತ್ ಸದಸ್ಯ ಡಾ. ಯತೀಂದ್ರ ಸಿದ್ದರಾಮಯ್ಯ ಮತ್ತು ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಸಂಸದ ಬಸವರಾಜ ಬೊಮ್ಮಾಯಿ ಸೇರಿದಂತೆ ಅನೇಕ ಗಣ್ಯರು ಭಾಗವಹಿಸುವರು ಎಂದು ಶಾಸಕ ಜಿ.ಎಸ್. ಪಾಟೀಲ ತಿಳಿಸಿದರು.

# ಜಗತ್ತಿಗೆ ವಿಶ್ವಕರ್ಮರ ಕೊಡುಗೆ ಅಪಾರ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ವಿಶ್ವಕರ್ಮ ಸಮಾಜದವರು ಸಮಾಜಕ್ಕೆ ಅಪಾರ ಕೊಡುಗೆ ನೀಡಿದ್ದಾರೆ. ಅದರಲ್ಲೂ ಅಮರಶಿಲ್ಪಿ ಜಕಣಾಚಾರಿ ಕೈಚಳಕದಿಂದ ನಿರ್ಮಿಸಿದ ದೇವಾಲಯಗಳು ಅವರ ಕಲಾ ನೈಪುಣ್ಯತೆಗೆ ಸಾಕ್ಷಿಯಾಗಿವೆ ಎಂದು ಪ.ಪಂ ಅಧ್ಯಕ್ಷ ಫಕೀರಪ್ಪ ಮಳ್ಳಿ ಹೇಳಿದರು.

ಇಲ್ಲಿನ ಪ.ಪಂ ಕಾರ್ಯಾಲಯದಲ್ಲಿ ಹಮ್ಮಿಕೊಂಡಿದ್ದ ವಿಶ್ವಕರ್ಮ ಜಯಂತಿ ಕಾರ್ಯಕ್ರಮದಲ್ಲಿ ವಿಶ್ವಕರ್ಮರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಅವರು ಮಾತನಾಡಿದರು. ಅನಾದಿ ಕಾಲದಿಂದಲೂ ದೇವಾಲಯಗಳ ನಿರ್ಮಾಣ ಕಾಲದಲ್ಲಿ ಶಿಲ್ಪಕಲೆಯ ಕೊಡುಗೆಯನ್ನು ನೀಡಿದವರು ವಿಶ್ವಕರ್ಮ ಸಮುದಾಯ. ಜಾತಿ-ಧರ್ಮದ ತಾರತಮ್ಯವಿಲ್ಲದೆ ಎಲ್ಲ ಜನಾಂಗದವರನ್ನು ಸಮಾನವಾಗಿ ಕಂಡವರು. ಶಿಲ್ಪಕಲೆಯನ್ನು ನಾವು ಆರಾಧಿಸಬೇಕು. ಅದನ್ನು ಉಳಿಸುವ ನಿಟ್ಟಿನಲ್ಲಿ ಎಲ್ಲರೂ ಪ್ರಯತ್ನ ಮಾಡಬೇಕು ಎಂದರು.

ಪ.ಪಂ ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ, ಸ್ಥಾಯಿ ಸಮಿತಿ ಚೇರಮನ್ ಮುತ್ತಪ್ಪ ನೂಲ್ಕಿ, ಸದಸ್ಯರು, ಮುಖ್ಯಾಧಿಕಾರಿ ಮಹೇಶ ನಿಡಶೇಶಿ, ವಿಶ್ವಕರ್ಮ ಸಮಾಜದ ಗಂಗಾಧರ ಬಡಿಗೇರ, ವೀರೇಶ ಶೆರೆವಾಡ, ಕಾಶಪ್ಪ ವಡ್ಡಟ್ಟಿ, ಮುತ್ತಣ್ಣ ಹೂಲಗೇರಿ, ಶರಣಪ್ಪ ಬಡಿಗೇರ, ಮುತ್ತಣ್ಣ ಪತ್ತಾರ, ಮಾನಪ್ಪ ಕಮ್ಮಾರ, ವಿಠ್ಠಲ ಪತ್ತಾರ, ಪ.ಪಂ ಸಿಬ್ಬಂದಿಯವರಿದ್ದರು.

ಕೆ.ಜಿ.ಎಸ್ ಶಾಲೆಯಲ್ಲಿ: ಪಟ್ಟಣದ ಕೆ.ಜಿ.ಎಸ್ ಶಾಲೆಯಲ್ಲಿ ವಿಶ್ವಕರ್ಮ ಜಯಂತಿಯನ್ನು ಆಚರಿಸಲಾಯಿತು. ಮುಖ್ಯ ಶಿಕ್ಷಕ ಬಸವರಾಜ ಕುರಿ ವಿಶ್ವಕರ್ಮರ ಕುರಿತು ಮಾತನಾಡಿದರು. ಸಿಬ್ಬಂದಿ ಮತ್ತು ವಿದ್ಯಾರ್ಥಿಗಳಿದ್ದರು.

ಬಸವೇಶ್ವರ ಶಾಲೆಯಲ್ಲಿ: ಪುರಾಣಗಳ ಪ್ರಕಾರ ವಿಶ್ವಕರ್ಮನು ಅಪ್ರತಿಮ ವಾಸ್ತುಶಿಲ್ಪಿ. ಅಸಾಧಾರಣ ಅರಮನೆಗಳಿಂದ ಹಿಡಿದು ದೇವರ ಆಯುಧಗಳು, ದೇವತೆಗಳಿಗೆ ಹಾರುವ ರಥಗಳವರೆಗೆ ಎಲ್ಲವನ್ನು ಸೃಷ್ಟಿಸಿದ ವಿನ್ಯಾಸಕರಾಗಿದ್ದಾರೆ ಎಂದು ಬಸವೇಶ್ವರ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕಿ ಭಾರತಿ ಶಿರ್ಸಿ ಹೇಳಿದರು. ಸಿಬ್ಬಂದಿಯವರು, ವಿದ್ಯಾರ್ಥಿಗಳಿದ್ದರು.

ಬೂದಿಹಾಳದಲ್ಲಿ: ಸಮೀಪದ ಬೂದಿಹಾಳ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವಿಶ್ವಕರ್ಮ ಜಯಂತಿಯನ್ನು ಆಚರಿಸಲಾಯಿತು. ಮುಖ್ಯ ಶಿಕ್ಷಕ ಬಿ.ವಿ ದೇಸಾಯಿಪಟ್ಟಿ, ಸಿ.ಕೆ. ಕೇಸರಿ, ಸಿಬ್ಬಂದಿ ಮತ್ತು ವಿದ್ಯಾರ್ಥಿಗಳಿದ್ದರು.

### ಪ್ರಧಾನಿ ನರೇಂದ್ರ ಮೋದಿಯವರ ಜನ್ಮದಿನದ ಅಂಗವಾಗಿ ರಕ್ತದಾನ ಶಿಬಿರ

# ವಿಕಸಿತ ಭಾರತ ಪ್ರಧಾನಿ ಮೋದಿಯವರ ಗುರಿ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿ ಗದಗ ಗ್ರಾಮೀಣ ಮಂಡಲದ ವತಿಯಿಂದ ಪ್ರಧಾನಿ ನರೇಂದ್ರ ಮೋದಿಯವರ ಜನ್ಮದಿನದ ಅಂಗವಾಗಿ ಗುರುವಾರ ನಾಗಾವಿ ಗ್ರಾಮದ ಶ್ರೀ ಶರಣಬಸವೇಶ್ವರ ಕಲ್ಯಾಣ ಮಂಟಪದಲ್ಲಿ ರಕ್ತದಾನ ಶಿಬಿರ ಜರುಗಿತು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಗದಗ ಗ್ರಾಮೀಣ ಮಂಡಲ ಅಧ್ಯಕ್ಷ ಬೂದಪ್ಪ ಹಳ್ಳಿ ಮಾತನಾಡಿ, 2047ರ ಹೊತ್ತಿಗೆ ಭಾರತವನ್ನು ಅಭಿವೃದ್ಧಿ ಹೊಂದಿದ ವಿಕಸಿತ ಭಾರತ ಮಾಡುವದು ಪ್ರಧಾನಿ ನರೇಂದ್ರ ಮೋದಿಯವರ ಗುರಿಯಾಗಿರುವುದು ಹೆಮ್ಮೆಯ ವಿಷಯ ಎಂದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಬಿಜೆಪಿ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ ಮಾತನಾಡಿ, ನಗರಗಳ ಅಭಿವೃದ್ಧಿಗೆ 2016 ಸ್ಮಾರ್ಟ್ ಸಿಟಿ ಯೋಜನೆ ಘೋಷಣೆ ಮಾಡಿ ಆಯ್ಕೆಯಾದ ಎಲ್ಲ ನಗರಗಳಿಗೆ 150 ಕೋಟಿ ರೂ ಅನುದಾನ ನೀಡಿ



ಪ್ರಧಾನಿ ನರೇಂದ್ರ ಮೋದಿಯವರು ಸೌಕರ್ಯ ಕಲ್ಪಿಸಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಗದಗ ಗ್ರಾಮೀಣ ಮಂಡಲ ಪ್ರಧಾನ ಕಾರ್ಯದರ್ಶಿ ಸುಭಾಸ ಸುಂಕದ, ಮಂಜುನಾಥ ಹಳ್ಳೂರಮಠ, ಪ್ರಮುಖರಾದ ಜಗದೀಶ ಚೆಂಚಲಿ, ರಾಜು ಕುಲಕರ್ಣಿ, ಮಹೇಶ ಕಮ್ಮಾರ, ರಾಜು ಗುಡಸಲಿಮನಿ, ಮಂಜು ಶಿರಹಟ್ಟಿ, ಭಾಗಪ್ಪ ವಗ್ಗರ, ಚನ್ನಬಸಪ್ಪ ಮಡಿವಾಳರ, ಶೇಖಣ್ಣ ಕಟ್ಟಿಮನಿ, ಶಿವಪ್ಪ ಹೊಂಬಳ, ನಾಗೇಶ ಕಮತರ, ಈಶ್ವರಪ್ಪ ಗೊಲಪ್ಪನವರ, ಮುತ್ತು ಹೊಂಬಳ, ಅಲ್ಲಾಸಾಬ ಪಿರಕಣ್ಣವರ, ಕಾಳು ತೊಟದ, ನೇಮಪ್ಪ ಮಾಳಗಿಮನಿ, ನಾಗೇಶ ತೋಟದ, ಬಸವರಾಜ ಬಾರಕೇರ, ಶ್ರೀಶೈಲಪ್ಪ ಹೊಂಬಳ, ಶ್ರೀಶೈಲಪ್ಪ ಹುಬ್ಬಳಳಿ, ಶರಣಯ್ಯ ಸಂಗನಾಳಮಠ, ಬಸಪ್ಪ ಹಡಗಲಿ, ಬಸಪ್ಪ ಹಳ್ಳಿಕೇರಿ, ತಿಪ್ಪಣ್ಣ ಅಕ್ಕಿ, ಮಂಜು ಬಳಿಗಾರ, ಬಸಲಿಂಗಯ್ಯ ಸಾಸೊಳಿಮಠ, ನೇಮಪ್ಪ ಲಮಾಣಿ, ಚೇತರ ಕರೂರ, ಸುರೇಶ ಬಸೆಟ್ಟಿ, ರಮೇಶ ಸಜ್ಜಗಾರ, ರವಿ ಮಾನ್ವಿ, ಬಸವೇಶ್ವರ ಭಜನಾ ಸಂಘ, ಗಂಗಾಧರ ಯುವ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಹಿರಿಯರಾದ ಬಿ.ಎಸ್. ಚೆಂಚಲಿ ಮಾತನಾಡಿ, ನರೇಂದ್ರ ಮೋದಿಯವರು ದೇಶದ ಪ್ರಧಾನಿಯಾದ ಬಳಿಕ ಭಾರತ ಅಭಿವೃದ್ಧಿ ಪಥದತ್ತ ಸಾಗುತ್ತಿದ್ದು, ಇದೊಂದು ಐತಿಹಾಸಿಕ ಯುಗವಾಗಿದೆ. ಅವರು ಭಾರತ ದೇಶದ ಬೆನ್ನೆಲುಬಾಗಿ ದೇಶದ ಜನರ ಹಿತಕ್ಕಾಗಿ ಶ್ರಮಿಸುತ್ತಿರುವದು ಶ್ಲಾಘನೀಯ ಎಂದರು.

## ಸಂಪಾದಕೀಯ

### ಜನಗಣತಿ ವರದಿ: ನಿರ್ಧಾರದ ಕೊರತೆ ಮತ್ತು ರಾಜಕೀಯ ಬಿಕ್ಕಟ್ಟು

ಕರ್ನಾಟಕದಲ್ಲಿ ಜಾತಿಗಣತಿ ವರದಿಯನ್ನು ಜಾರಿಗೊಳಿಸುವ ಬಗ್ಗೆ ರಾಜ್ಯದಾದ್ಯಂತ ದೊಡ್ಡ ನಿರೀಕ್ಷೆ ಇತ್ತು. ಆದರೆ, ಇತ್ತೀಚೆಗೆ ನಡೆದ ವಿಶೇಷ ಸಚಿವ ಸಂಪುಟ ಸಭೆಯಲ್ಲಿ ಈ ಕುರಿತು ಯಾವುದೇ ನಿರ್ಧಾರ ಕೈಗೊಳ್ಳದೆ, ವಿಷಯವನ್ನು ಮುಂದೂಡಿದ್ದು ರಾಜ್ಯದ ಜನರಲ್ಲಿ ನಿರಾಸೆ ಮೂಡಿಸಿದೆ. ಸುದೀರ್ಘ ಚರ್ಚೆಯ ಬಳಿಕವೂ ಒಮ್ಮತಕ್ಕೆ ಬರಲು ಸಾಧ್ಯವಾಗದಿರುವುದು ಸರ್ಕಾರದ ಆಂತರಿಕ ಬಿಕ್ಕಟ್ಟನ್ನು ಸ್ಪಷ್ಟಪಡಿಸುತ್ತದೆ.

ಸಭೆಯ ಆಂತರಿಕ ವರದಿಗಳ ಪ್ರಕಾರ, ಲಿಂಗಾಯತ ಮತ್ತು ಒಕ್ಕಲಿಗ ಸಮುದಾಯದ ಸಚಿವರು ವರದಿಯನ್ನು ವಿರೋಧಿಸಿ ಏರು ಧ್ವನಿಯಲ್ಲಿ ಮಾತನಾಡಿದ್ದಾರೆ. ಇದು ಕೇವಲ ಒಂದು ಆಡಳಿತಾತ್ಮಕ ನಿರ್ಧಾರವಲ್ಲದೆ, ಸರ್ಕಾರದೊಳಗೆಯೇ ವಿವಿಧ ಸಮುದಾಯಗಳ ನಡುವೆ ಇರುವ ರಾಜಕೀಯ ಒತ್ತಡಗಳನ್ನು ಬಿಂಬಿಸುತ್ತದೆ. ಜಾತಿಗಣತಿ ವರದಿಯು ರಾಜ್ಯದ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ವಾಸ್ತವಗಳನ್ನು ಬಹಿರಂಗಪಡಿಸುತ್ತದೆ ಎಂದು ನಿರೀಕ್ಷಿಸಲಾಗಿತ್ತು. ಈ ಅಂಕಿ ಅಂಶಗಳ ಆಧಾರದ ಮೇಲೆ ಸರ್ಕಾರವು ನೀತಿಗಳನ್ನು ರೂಪಿಸಬಹುದಿತ್ತು. ಆದರೆ, ಪ್ರಮುಖ ಸಮುದಾಯಗಳ ವಿರೋಧದಿಂದಾಗಿ ಈ ವರದಿ ರಾಜಕೀಯ ದಾಳವಾಗಿ ಪರಿಣಮಿಸಿದೆ. ಸರ್ಕಾರಕ್ಕೆ ಬಹುಮತವಿದ್ದರೂ, ಪ್ರಮುಖ ಸಮುದಾಯಗಳ ಬೆಂಬಲ ಕಳೆದುಕೊಳ್ಳುವ ಭೀತಿಯಿಂದ ನಿರ್ಧಾರ ತೆಗೆದುಕೊಳ್ಳಲು ಹಿಂಜರಿಯುತ್ತಿದೆ. ಇದು ಕೇವಲ ಈಗಿನ ಸರ್ಕಾರದ ಸಮಸ್ಯೆಯಲ್ಲ, ಬದಲಾಗಿ ಯಾವುದೇ ಸರ್ಕಾರಕ್ಕೂ ಇಂತಹ ಸೂಕ್ಷ್ಮ ವಿಷಯಗಳಲ್ಲಿ ನಿರ್ಧಾರ ತೆಗೆದುಕೊಳ್ಳುವುದು ಸವಾಲಾಗಿದೆ.

ಈ ನಿರ್ಧಾರವನ್ನು ಮುಂದೂಡುವುದರಿಂದ ಸಮಸ್ಯೆಯು ತಾತ್ಕಾಲಿಕವಾಗಿ ಪರಿಹಾರವಾದರೂ, ದೀರ್ಘಾವಧಿಯಲ್ಲಿ ಇದು ಸರ್ಕಾರದ ವಿಶ್ವಾಸಾರ್ಹತೆಗೆ ಧಕ್ಕೆ ತರಬಹುದು. ಈಗಲೂ ಈ ವರದಿ ಜಾರಿಗೊಳ್ಳುವುದೇ ಇಲ್ಲವೇ ಎಂಬ ಪ್ರಶ್ನೆ ಉಳಿದುಕೊಂಡಿದ್ದು, ಸರ್ಕಾರ ಸೂಕ್ತ ಸಮಯದಲ್ಲಿ ದೃಢವಾದ ಮತ್ತು ಜನಪರ ನಿರ್ಧಾರ ತೆಗೆದುಕೊಳ್ಳುವುದು ಅವಶ್ಯಕವಾಗಿದೆ. ಇಲ್ಲವಾದರೆ, ಆಡಳಿತ ಪಕ್ಷದೊಳಗಿನ ಭಿನ್ನಾಭಿಪ್ರಾಯಗಳು ರಾಜ್ಯದ ಪ್ರಗತಿಗೆ ಅಡ್ಡಿಯಾಗಬಹುದು.

## ಸೆ. 22ರಿಂದ ಅಡವೀಂದ್ರಸ್ವಾಮಿಮಠದ 45ನೇ ವರ್ಷದ ದಸರಾ ಮಹೋತ್ಸವ

# ಘಟಸ್ಥಾಪನೆ, ಶ್ರೀದೇವಿ ಪುರಾಣ ಪ್ರಾರಂಭೋತ್ಸವ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮುಳಗುಂದನಾಕಾ ಬಳಿಯ ಶ್ರೀಅಡವೀಂದ್ರಸ್ವಾಮಿ ಮಠದಲ್ಲಿ 45ನೇ ವರ್ಷದ ದಸರಾ ಮಹೋತ್ಸವ, ಘಟಸ್ಥಾಪನೆ, ಶ್ರೀದೇವಿ ಪುರಾಣ ಪ್ರಾರಂಭೋತ್ಸವ ಮತ್ತು ಶ್ರೀಅನ್ನಪೂರ್ಣೇಶ್ವರಿದೇವಿ ಮಹಾರಥೋತ್ಸವ ಕಾರ್ಯಕ್ರಮಗಳು ಸೆ.22ರಿಂದ ಅಕ್ಟೋಬರ್ 3ರವರೆಗೆ ಜರುಗಲಿವೆ ಎಂದು ಶ್ರೀಅನ್ನಪೂರ್ಣೇಶ್ವರಿದೇವಿ ಜಾತ್ರಾ ಮಹೋತ್ಸವ ಸಮಿತಿಯ ಅಧ್ಯಕ್ಷ ಸದಾಶಿವಯ್ಯ ಎಸ್.ಮದರಿಮಠ ತಿಳಿಸಿದರು.



ನಗರದ ಮುಳಗುಂದ ನಾಕಾ ಬಳಿಯ ಶ್ರೀಅಡವೀಂದ್ರಸ್ವಾಮಿ ಮಠದಲ್ಲಿ ಗುರುವಾರ ಏರ್ಪಡಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ಸೆ.22ರಂದು ಮುದೇನೂರ ಶಶಿಧರ ಮಹಾಸ್ವಾಮಿಗಳವ ಕೃಪಾಶೀರ್ವಾದಿಂದ ಶಮಿ, ಆರಿ, ಬಿಲ್ವ ವೃಕ್ಷಗಳ ಸಂಗಮದ ಪವಿತ್ರ ಸ್ಥಳದಲ್ಲಿ ಸ್ಥಾಪಿಸಲ್ಪಟ್ಟ ಶ್ರೀಅನ್ನಪೂರ್ಣೇಶ್ವರಿಯ ಸನ್ನಿಧಿಯಲ್ಲಿ 45ನೇ ವರ್ಷದ ಶ್ರೀದೇವಿ ಪುರಾಣ ಪ್ರವಚನ ಪ್ರಾರಂಭೋತ್ಸವ ಜರುಗಲಿದೆ. ಡಾ. ರಾಜಗುರು ಗುರುಸ್ವಾಮಿ ಕಲಕೇರಿ ಪುರಾಣ ಪ್ರವಚನ ಮಾಡುವರು, ಚನ್ನಬಸಯ್ಯ ಶಾಸ್ತ್ರಿಗಳು ಹೇಮಗಿರಿಮಠ ಪುರಾಣ ಪಠಣ ಮಾಡುವರು ಎಂದರು.

ಸೆ.22ರಂದು ಮುಂಜಾನೆ 9 ಗಂಟೆಗೆ ಧರ್ಮ ಧ್ವಜಾರೋಹಣವನ್ನು ಶ್ರೀಅಡವೀಂದ್ರಸ್ವಾಮಿ ಮಠದ ಧರ್ಮದರ್ಶಿಗಳಾದ ಮಹೇಶ್ವರ ಸ್ವಾಮಿಗಳವರ ಸಮ್ಮುಖದಲ್ಲಿ ಹಿರೇವಡ್ಡಟ್ಟಿಯ ವೀರೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ನೆರವೇರಿಸುವರು. ಸಂಜೆ 6.30ಕ್ಕೆ ಘಟಸ್ಥಾಪನೆ ಹಾಗೂ ಶ್ರೀದೇವಿ ಪುರಾಣ ಪ್ರಾರಂಭೋತ್ಸವವನ್ನು ಶ್ರೀಗುರು ಅಭಿನವ ಮೃತ್ಯುಂಜಯ ಸ್ವಾಮೀಜಿ ಸಾನ್ನಿಧ್ಯದಲ್ಲಿ ಶುಭ್ ಜುವೆಲರ್ಸ್ ಮಾಲೀಕರಾದ ಪೂಜಾ ಕಿರಣ ಭೂಮಾ ಹಾಗೂ ದತ್ತಾ ಪ್ರಾಪರ್ಟಿಸ್ ವ್ಯವಸ್ಥಾಪಕರಾದ ಕಿರಣ ಪ್ರಕಾಶ ಭೂಮಾ ಉದ್ಘಾಟಿಸುವರು ಎಂದು ಹೇಳಿದರು.

ಸೆ.23ರ ಸಂಜೆ 6.30ಕ್ಕೆ ಶ್ರೀದೇವಿಗೆ ಹಾಗೂ ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮ ಜರುಗಲಿದ್ದು, ಸೆ.24 ಹಾಗೂ ಸೆ.25ರಂದು ಸಂಜೆ 6.30 ಗಂಟೆಗೆ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿವೆ. ಸೆ.26ರಂದು ಸಂಜೆ 6.30 ಗಂಟೆಗೆ ಶ್ರೀದೇವಿಗೆ ಹಾಗೂ ಮುತ್ತೈದೆಯರಿಗೆ ಅರಿಷಿಣ, ಕುಂಕುಮ, ಬಳೆ ಸೇವೆ ಜರುಗಲಿದೆ. ಸೆ.27ರಂದು ಸಂಜೆ 6.30 ಗಂಟೆಗೆ ಧಾರ್ಮಿಕ ಕಾರ್ಯಕ್ರಮ, ಸೆ.28ರಂದು ಮುಂಜಾನೆ 10 ಗಂಟೆಗೆ ಉಚಿತ ಆರೋಗ್ಯ ತಪಾಸಣೆ ಹಾಗೂ ಚಿಕಿತ್ಸಾ ಶಿಬಿರ ಡಾ. ವೀರೇಶ ದ್ಯಾವಣ್ಣರ ಹಾಗೂ ಅಭಿಷೇಕ ಹೊಸಳ್ಳಿಮಠ ಅವರ ತಂಡದಿಂದ ಜರುಗಲಿದೆ. ಸೆ.28ರಿಂದ 30ರವರೆಗೆ ಪ್ರತಿದಿನ ಸಂಜೆ 6.30ಕ್ಕೆ ಧಾರ್ಮಿಕ ಕರ್ಯಕ್ರಮಗಳು ಜರುಗಲಿವೆ ಎಂದರು.

ಅ.3ರಂದು ಮುಂಜಾನೆ 7.15ಕ್ಕೆ ಗದಗ ಒಕ್ಕಲಗೇರಿ ಶ್ರಿರಾಯಚೋಟಿ ವಿರಭದ್ರೇಶ್ವರ ದೇವಸ್ಥಾನದಿಂದ ಕುಂಭೋತ್ಸವ ಹೊರಡುವುದು. ಮುಂಜಾನೆ 9.30ಕ್ಕೆ ಶ್ರೀ ಅನ್ನಪೂರ್ಣೇಶ್ವರಿದೇವಿಗೆ ಹಾಗೂ ಕರ್ತೃ ಗದ್ದುಗೆಗೆ ಕುಂಬಾಭಿಷೇಕ, ಮಧ್ಯಾಹ್ನ 12ಕ್ಕೆ ಪುಣ್ಯಸ್ಮರಣೋತ್ಸವ, ಮಹಾ ಪ್ರಸಾದ ಜರುಗಲಿದೆ. ಮಧ್ಯಾಹ್ನ 3.30ಕ್ಕೆ ತೇರಿನಹಗ್ಗ ಮುಳಗುಂದ ರಸ್ತೆಯ ಜಗದಂಭಾ ದೇವಸ್ಥಾನದಿಂದ ಶ್ರೀಮಠಕ್ಕೆ ಆಗಮಿಸುವುದು. ಸಂಜೆ 5ಕ್ಕೆ ಶ್ರೀಅನ್ನಪೂರ್ಣೇಶ್ವರಿದೇವಿ ಮಹಾರಥೋತ್ಸವ ಕನಕಗಿರಿಯ ಸುವರ್ಣಗಿರಿ ಸಂಸ್ಥಾನಮಠದ ಶ್ರೀನಿರಂಜನಪ್ರಭು ಚನ್ನಮಲ್ಲ ಮಹಾಸ್ವಾಮಿಗಳ ಸಾನ್ನಿಧ್ಯದಲ್ಲಿ ಜರುಗುವುದು. ಸಂಜೆ 7ಕ್ಕೆ ಜಾನಪದ ವಿದ್ವಾಂಸರಾದ ಡಾ. ಶಂಭು ಬಳಿಗಾರ ಅವರಿಂದ ಜಾನಪದ ಜೀವನ ದರ್ಶನ ಕಾರ್ಯಕ್ರಮ ಜರುಗಲಿದೆ. ಅ.4ರಂದು ಸಂಜೆ 6.30ಕ್ಕೆ ಕಡುಬಿನ ಕಾಳಗ ಪುರವಂತರ ಸಮ್ಮುಖದಲ್ಲಿ ವಾಧ್ಯ ವೈಭವದೊಂದಿಗೆ ಜರುಗುವುದು ಎಂದು ಹೇಳಿದರು.

ಅಕ್ಟೋಬರ್ 1ರಂದು ಸಂಜೆ 6.30ಕ್ಕೆ ಆಯುಧಪೂಜೆ, ಕುಮಾರಿ ಪೂಜೆ ಹಾಗೂ ಶ್ರೀದೇವಿ ಪುರಾಣ ಮಂಗಲೋತ್ಸವ ಜರುಗಲಿದೆ. ಅ.2ರಂದು ಮುಂಜಾನೆ 9ಕ್ಕೆ ಗದಗ ಶ್ರೀರೇಣುಕಾಚಾರ್ಯ ಮಂದಿರದಿಂದ ಭವ್ಯ ಮೆರವಣಿಗೆ ಮೂಲಕ ತೇರಿನ ಕಳಸ ಆಗಮನ, ಮುಂಜಾನೆ 10ಕ್ಕೆ ಕಳಸಾರೋಹಣ ಪೂಜ್ಯಶ್ರೀಗಳವರಿಂದ ಜರುಗುವುದು. ಮುಂಜಾನೆ 11ಕ್ಕೆ ವಿಜಯದಶಮಿ ಬನ್ನಿಮುಡಿಯುವ ಕಾರ್ಯಕ್ರಮ ಜರುಗಲಿದೆ ಎಂದು ಸದಾಶಿವಯ್ಯ ಎಸ್.ಮದರಿಮಠ ತಿಳಿಸಿದರು.

ಶ್ರೀಅನ್ನಪೂರ್ಣೇಶ್ವರಿದೇವಿ ಜಾತ್ರಾ ಮಹೋತ್ಸವ ಸಮಿತಿಯ ಗೌರವಾಧ್ಯಕ್ಷ ಎಸ್.ಪಿ. ಸಂಶಿಮಠ, ಪ್ರಧಾನ ಕಾರ್ಯದರ್ಶಿ ಶರಣಬಸಪ್ಪ ಎಸ್.ಗುಡಿಮನಿ, ಸಹ ಕಾರ್ಯದರ್ಶಿ ಗುರುಬಸವಲಿಂಗ ದಾನಪ್ಪ ತಡಸದ, ಕೋಶಾಧ್ಯಕ್ಷ ವಿರುಪಣ್ಣ ಬಳ್ಳೊಳ್ಳಿ, ಮಹಿಳಾ ಸಮಿತಿ ಅಧ್ಯಕ್ಷರಾದ ಸುವರ್ಣಾ ಎಸ್.ಮದರಿಮಠ, ಕಾರ್ಯದರ್ಶಿ ಗೀತಾ ವಿ.ಹೂಗಾರ, ಸಹಕಾರ್ಯದರ್ಶಿ ಸುಷ್ಮಾ ಎಸ್. ಖಂಡಪ್ಪಗೌಡ್ರ, ಕೋಶಾಧ್ಯಕ್ಷರಾದ ಅಶ್ವಿನಿ ಎಸ್.ನೀಲಗುಂದ, ವೀರೇಶ ಕೂಗು, ಕಸ್ತೂರಿಬಾಯಿ ಭಾಂಡಗೆ, ವಿನೋದ ಭಾಂಡಗೆ, ರಾಜು ಕುರಡಗಿ, ವಿ.ಎಚ್. ದೇಸಾಯಿಗೌಡ್ರ ಪತ್ರಿಕಾಗೋಷ್ಠಿಯಲ್ಲಿದ್ದರು.

## ಭಾರತದಲ್ಲಿ ನೇಪಾಳದಂತಹ ಅಶಾಂತಿ ಸೃಷ್ಟಿಸಲು ರಾಹುಲ್ ಗಾಂಧಿ ಬಯಸುತ್ತಿದ್ದಾರೆ: ಅನುರಾಗ್ ಠಾಕೂರ್

■ವಿಜಯಸಾಕ್ಷಿ ಸುದ್ದಿ, ನೇಪಾಳ

ಆಳಂದ ಮತ ಕಳ್ಳತನ ಕುರಿತ ಸ್ಫೋಟಕ ಪತ್ರಿಕಾಗೋಷ್ಠಿಯ ನಂತರ ಲೋಕಸಭೆ ವಿಪಕ್ಷ ನಾಯಕನನ್ನು ಬಿಜೆಪಿ ಟೀಕಿಸಿದೆ. 'ಭಾರತದಲ್ಲಿ ಬಾಂಗ್ಲಾದೇಶ ಮತ್ತು ನೇಪಾಳದಂತಹ ಪರಿಸ್ಥಿತಿಯನ್ನು ಸೃಷ್ಟಿಸಲು ರಾಹುಲ್ ಗಾಂಧಿ ಬಯಸುತ್ತಿದ್ದಾರೆ" ಎಂದು ಅನುರಾಗ್ ಠಾಕೂರ್ ಆರೋಪಿಸಿದ್ದಾರೆ.

'ವೋಟ್ ಚೋರಿ ಹೈಡ್ರೋಜನ್ ಬಾಂಬ್' ಹಾಕುವುದಾಗಿ ಎಚ್ಚರಿಸಿದ್ದ ಗಾಂಧಿ, ಇಂದು ಬಿಜೆಪಿ ಮತ್ತು ಚುನಾವಣಾ ಆಯೋಗದಿಂದ ವ್ಯವಸ್ಥಿತ ಮತದಾರರ ವಂಚನೆಯ 'ಪುರಾವೆ'ಗಳೊಂದಿಗೆ ವಿವರಣೆ ನೀಡಿದರು. "ಭಾರತದ ಚುನಾವಣಾ ಆಯೋಗವು ಪಕ್ಷಪಾತವಿಲ್ಲದೆ ಕಾರ್ಯನಿರ್ವಹಿಸುತ್ತಿರುವಾಗ, ರಾಹುಲ್ ಗಾಂಧಿ ಪ್ರಜಾಪ್ರಭುತ್ವವನ್ನು ದುರ್ಬಲಗೊಳಿಸುವಲ್ಲಿ, ನಾಗರಿಕರನ್ನು ದಾರಿ ತಪ್ಪಿಸುತ್ತಿದ್ದಾರೆ.

## ಕುಮಾರ ಬಡಿಗೇರರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಗದಗ ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಸಹಯೋಗದಲ್ಲಿ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಶ್ರೀ ವಿಶ್ವಕರ್ಮ ಜಯಂತಿಯನ್ನು ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಕೆತ್ತನೆಯ ವಿವಿಧ ವಿಭಾಗಗಳಲ್ಲಿ ಸಾಧನೆಗೈದ ಗದಗ ಶಿಲ್ಪಿಗಾರ ಕುಮಾರ ಬಡಿಗೇರ ಇವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ ಕೆ.ಆರ್, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಕಾರ್ಮಿಕ ಇಲಾಖೆ ಅಧಿಕಾರಿ ಶ್ರೀಶೈಲ ಸೋಮನಕಟ್ಟಿ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಆರ್.ಎಸ್. ಬುರಡಿ, ವಾರ್ತಾಧಿಕಾರಿ ವಸಂತ ಮಡ್ಲೂರ, ಶ್ರೀಧರ ಚಿನಗಡಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ವಿಶ್ವಕರ್ಮ ಸಮಾಜದ ಅಧ್ಯಕ್ಷರು ಹಾಗೂ ಸಮಾಜದ ಹಿರಿಯರು ಉಪಸ್ಥಿತರಿದ್ದರು.

## ಬಿಜೆಪಿ ಸೇವಾ ಪಾಕ್ಷಿಕ ಅಭಿಯಾನ




■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಬಿಜೆಪಿ ಶಿರಹಟ್ಟಿ ಮಂಡಲದ ವತಿಯಿಂದ ಸೇವಾ ಪಾಕ್ಷಿಕ ಅಭಿಯಾನದ ಕಾರ್ಯಾಗಾರವನ್ನು ಶಾಸಕ ಡಾ: ಚಂದ್ರು ಲಮಾಣಿ ತಮ್ಮ ಕಾರ್ಯಾಲಯದಲ್ಲಿ ಉದ್ಘಾಟಿಸಿದರು.

ನಂತರ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿಯವರ ಜನ್ಮದಿನದ ಪ್ರಯುಕ್ತ ಸೆ. 17ರಿಂದ ಅಕ್ಟೋಬರ್ 2ರವರೆಗೆ ವಿವಿಧ ಸೇವಾ ಕಾರ್ಯಗಳು ನಡೆಯಲಿದ್ದು, ಸೇವಾ ಪಾಕ್ಷಿಕ ಅಭಿಯಾನದಡಿಯಲ್ಲಿ ಆರೋಗ್ಯ ಶಿಬಿರ, ರಕ್ತದಾನ ಶಿಬಿರ, ಸ್ವಚ್ಛತಾ ಕಾರ್ಯಕ್ರಮ, ತಾಯಿಯ ಹೆಸರಿನಲ್ಲಿ ಒಂದು ಸಸಿ, ಚಿತ್ರಕಲಾ ಕಾರ್ಯಕ್ರಮಗಳು ಜರುಗಲಿವೆ. ಬಿಜೆಪಿಯ ಪ್ರತಿಯೊಬ್ಬ ಕಾರ್ಯಕರ್ತರು ಈ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಕರೆ ನೀಡಿದರು.

ಶಿರಹಟ್ಟಿ ಮಂಡಲದ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ, ನಗರ ಘಟಕದ ಅಧ್ಯಕ್ಷ ನಾಗರಾಜ ಲಕ್ಕುಂಡಿ ಮಾತನಾಡಿದರು. ಜಿ.ಪಂ ಮಾಜಿ ಸದಸ್ಯ ಶಿವಪ್ರಕಾಶ್ ಮಹಾಜನಶೆಟ್ಟರ, ಫಕೀರೇಶ ರಟ್ಟಿಹಳ್ಳಿ, ಸಂದೀಪ್ ಕಪ್ಪತ್ತನವರ, ತಿಮ್ಮರೆಡ್ಡಿ ಮರಡ್ಡಿ, ನಂದಾ ಪಲ್ಲೇದ, ಮಹೇಶ್ ಬಡ್ನಿ, ಶಂಕರ ಮರಾಠೆ, ಜಾನು ಲಮಾಣಿ, ಬಸವರಾಜ ವಡವಿ, ಸಂತೋಷ್ ಓಬಾಜಿ, ಪರಶುರಾಮ್ ಡೊಂಕಬಳ್ಳಿ, ತಿಪ್ಪಣ್ಣ ಕೊಂಚಗೇರಿ, ಮೋಹನ್ ಗುತ್ಯಮ್ಮನವರ, ಪ್ರವೀಣಗೌಡ ಪಾಟೀಲ, ಅನಿಲ ಮುಳಗುಂದ ಮುಂತಾದವರು ಉಪಸ್ಥಿತರಿದ್ದರು.

## ಚರಂಡಿ ಸ್ವಚ್ಛಗೊಳಿಸಲು ಮನವಿ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ವಾರ್ಡ್ ನಂ. 1ರ ಅಶ್ವಿನಿ ನಗರದಲ್ಲಿನ ಚರಂಡಿಗಳಲ್ಲಿ ಹೂಳು ತುಂಬಿಕೊಂಡು ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದ್ದು, ಕೂಡಲೇ ಚರಂಡಿ ಸ್ವಚ್ಛಗೊಳಿಸಬೇಕು ಎಂದು ಸಾರ್ವಜನಿಕರು ಪಟ್ಟಣ ಪಂಚಾಯಿತಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಆನಂದ ಜಾಧವ, ಮೋಹನ ರಸಾಳಕರ, ಮಹೇಶ ಹುಲಿ, ಬಸವರಾಜ ನಿಂಗೋಜಿ, ಗೀತಾ ಜಾಧವ, ರಾಮಣ್ಣಾ ಕಮಾಜಿ, ಮಂಜುನಾಥ ಲಾಳಿ, ಶೇಖಪ್ಪ ಸಿದ್ದನಗೌಡರ, ಮಾಹಾಂತೇಶ ಜಾಧವ ಇದ್ದರು.



## ಉತ್ತರಾಖಂಡದ ಚಮೋಲಿಯಲ್ಲಿ ಭೂಕುಸಿತ-ಪ್ರವಾಹ; 10 ಜನರು ಕಣ್ಮರೆ

■ವಿಜಯಸಾಕ್ಷಿ ಸುದ್ದಿ, ಉತ್ತರಾಖಂಡ

ಉತ್ತರಾಖಂಡ ರಾಜ್ಯದ ಚಮೋಲಿ ಜಿಲ್ಲೆಯ ನಂದನಗರದಲ್ಲಿ ಗುರುವಾರ ಭಾರೀ ಮಳೆಯ ನಂತರ ಹಳ್ಳಿಯೊಂದರಲ್ಲಿ ಭೂಕುಸಿತ ಸಂಭವಿಸಿ ಮನೆಗಳು ನೆಲಸಮಗೊಂಡಿವೆ. ನದಿಯೊಂದರಿಂದ ಮತ್ತೊಂದು ಹಳ್ಳಿಗೆ ನೀರು ನುಗ್ಗಿ ಹತ್ತು ಜನರು ಕಾಣೆಯಾಗಿದ್ದಾರೆ. ರಾಜ್ಯವು ಈಗಾಗಲೇ ಹಲವು ದಿನಗಳಿಂದ ಭೂ ಕುಸಿತದಿಂದ ತತ್ತರಿಸುತ್ತಿದೆ.

ಕುಂಟಾರಿ ಗ್ರಾಮದಲ್ಲಿ ಭೂಕುಸಿತದಿಂದ ಸುಮಾರು ಅರ್ಧ ಡಜನ್ ಮನೆಗಳಿಗೆ ಹಾನಿಯಾಗಿದೆ. ಕುಂಟಾರಿ ಗ್ರಾಮದಲ್ಲಿ ಒಂದೇ ಕುಟುಂಬದ ನಾಲ್ವರು ಸದಸ್ಯರು ಸೇರಿದಂತೆ ಎಂಟು ಜನರು ಕಾಣೆಯಾಗಿದ್ದಾರೆ. ಉಳಿದ ಇಬ್ಬರು ಧುರ್ಮಾ ಗ್ರಾಮದವರು. ಅಲ್ಲಿ ಮೋಕ್ಷ ನದಿಯು ಉಕ್ಕಿ ಹರಿಯುತ್ತಿದ್ದು, ನೀರು ಬಹು ಕಟ್ಟಡಗಳಿಗೆ ಹಾನಿ ಮಾಡಿದೆ ಎಂದು ಚಮೋಲಿ ಜಿಲ್ಲಾ ಮ್ಯಾಜಿಸ್ಟ್ರೇಟ್ (ಡಿಎಂ) ಸಂದೀಪ್ ತಿವಾರಿ ತಿಳಿಸಿದ್ದಾರೆ.

ಕುಂಟಾರಿಯಲ್ಲಿ, ಸ್ಥಳೀಯ ಪರಿಹಾರ ಮತ್ತು ರಕ್ಷಣಾ ತಂಡಗಳು ಕಾಣೆಯಾದವರಿಗಾಗಿ ಶೋಧ ಕಾರ್ಯಾಚರಣೆ ನಡೆಸುತ್ತಿವೆ. ನಂದನಗರಕ್ಕೆ ಹೋಗುವ ಪ್ರವೇಶ ರಸ್ತೆಯು ಪ್ರವಾಹದ ಅವಶೇಷಗಳಿಂದ ಮುಚ್ಚಿಹೋಗಿದೆ ಎಂದು ಡಿಎಂ ಹೇಳಿದರು. ಕಾಣೆಯಾದವರನ್ನು ಕುನ್ವರ್ ಸಿಂಗ್ (42), ಅವರ ಪತ್ನಿ ಕಾಂತಾ ದೇವಿ (38) ಮತ್ತು ಅವರ ಇಬ್ಬರು ಪುತ್ರರಾದ ವಿಕಾಸ್ ಮತ್ತು ವಿಶಾಲ್ (ಇಬ್ಬರೂ 10 ವರ್ಷ), ನರೇಂದ್ರ ಸಿಂಗ್ (40), ಜಗದಂಬ ಪ್ರಸಾದ್ (70) ಮತ್ತು ಅವರ ಪತ್ನಿ ಭಾಗಾ ದೇವಿ (65), ಮತ್ತು ದೇವೇಶ್ವರಿ ದೇವಿ (65) ಎಂದು ಗುರುತಿಸಲಾಗಿದೆ.

ಪರಿಹಾರ ಮತ್ತು ರಕ್ಷಣಾ ಕಾರ್ಯಾಚರಣೆಯಲ್ಲಿ ತೊಡಗಿಸಿಕೊಂಡಿರುವ ಸ್ಥಳೀಯ ನಿವಾಸಿ ಮತ್ತು ಭಾರತೀಯ ರೆಡ್‌ಕ್ರಾಸ್‌ನ ಜಿಲ್ಲಾ ಶಾಖೆಯ ಉಪಾಧ್ಯಕ್ಷ ನಂದನ್ ಸಿಂಗ್, ಜೌಗು ಪ್ರದೇಶವು ರಕ್ಷಣಾ ಕಾರ್ಯಾಚರಣೆಗೆ ಅಡ್ಡಿಯಾಗುತ್ತಿದೆ ಎಂದು ಹೇಳಿದರು.

## ಮೋದಿಯವರ ಕನಸು ಸಾಕಾರಗೊಳಿಸೋಣ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪ್ರಧಾನಿ ನರೇಂದ್ರ ಮೋದಿ ಭಾರತವನ್ನು ವಿಶ್ವಗುರುವಾಗಿಸುವ ಕನಸು ಕಂಡಿದ್ದು, ಅದನ್ನು ಸಾಕಾರಗೊಳಿಸುವಲ್ಲಿ ಪ್ರತಿಯೊಬ್ಬ ಕಾರ್ಯಕರ್ತನ ಪಾತ್ರ ಪ್ರಮುಖವಾಗಿದೆ ಎಂದು ಗದಗ ಜಿಲ್ಲಾ ಬಿಜೆಪಿ ಉಪಾಧ್ಯಕ್ಷ ಭದ್ರೇಶ ಕುಸ್ಲಾಪೂರ ಹೇಳಿದರು.

ಅವರು ಕಣವಿ ಸರಕಾರಿ ಪ್ರಾಥಮಿಕ ಶಾಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿಯವರ 75ನೇ ಜನ್ಮದಿನದ ನಿಮಿತ್ತ ಸೇವಾ ಪಾಕ್ಷಿಕ ಅಭಿಯಾನದಡಿ ಶಾಲಾ ಆವರಣ ಸ್ವಚ್ಛತೆ ಹಾಗೂ ಸಸಿ ನೆಡುವ ಕಾರ್ಯಕ್ರಮದಲ್ಲಿ ಮಾತನಾಡಿದರು.

ಭಾರತ ಕಂಡ ಅತ್ಯಂತ ಕ್ರೀಯಾಶೀಲ ಪ್ರಧಾನ ಮಂತ್ರಿಯಾಗಿ, ವಿಶ್ವಕ್ಕೆ ಮಾದರಿ ನಾಯಕರಾಗಿ, ಸಂಕಲ್ಪ, ಸ್ವಚ್ಛ ಭಾರತ, ಸೇವೆ, ಸಬಲೀಕರಣ, ಸಂಘಟನೆ, ಶಾಂತಿ ಮೂಲಮಂತ್ರಗಳನ್ನು ತಮ್ಮ ಬದುಕಿನ ಉದ್ದಗಲಕ್ಕೂ ಅಳವಡಿಸಿಕೊಳ್ಳುವುದರ ಮೂಲಕ ಭಾರತವನ್ನು ವಿಶ್ವದಲ್ಲಿ ಅಗ್ರಸ್ಥಾನಕ್ಕೆ ಕೊಂಡೊಯ್ದಿದ್ದಾರೆ. ಇಂತಹ ಪ್ರಧಾನಿ ದೊರೆತಿದ್ದು ನಮ್ಮೆಲ್ಲರ ಪುಣ್ಯ ಎಂದರು.

ಗದಗ ಗ್ರಾಮೀಣ ಮಂಡಳ ಅಧ್ಯಕ್ಷ ಬೂದಪ್ಪ ಹಳ್ಳಿ, ಅರವಿಂದ ಅಣ್ಣಿಗೇರಿ, ಸುಭಾಷ ಸುಂಕದ, ಬಿ.ಎಸ್. ಚಿಂಚಲಿ, ಸೋಮಣ್ಣಾ ಕೋರಿ, ಪ್ರಕಾಶ ಕುರ್ತಕೋಟಿ, ನಿಂಗಪ್ಪ ಶಿರಹಟ್ಟಿ, ಶರಣಪ್ಪ ಬಳಿಗೇರ, ನಾಗರಾಜ ಮಡ್ಲೂರ, ಶೇಖಪ್ಪ ಶಿರಹಟ್ಟಿ, ಶಂಬುಲಿಂಗ ಮರಿಯಣ್ಣನವರ, ಬೂದಪ್ಪ ವಾಡಳ್ಳಿ, ಮಲ್ಲಪ್ಪ ಕನ್ನೂರ, ಮೈಲಾರಪ್ಪ ಹುಲಕೋಟಿ, ಕೃಷ್ಣಾ ನಾಗಲೋಟಿ, ರಮೇಶ ಬೂಳನವರ, ಕಿರಣ ಜಿಡ್ಡಿಮನಿ, ಮಂಜುನಾಥ ಹಳ್ಳೂರಮಠ, ಹನಮಂತಪ್ಪ ಘೋಡಕೆ ಹಾಗೂ ಪಕ್ಷದ ಕಾರ್ಯಕರ್ತರು ಇದ್ದರು.

# ಕಾನೂನು ಪದವೀಧರರಿಗೆ ತರಬೇತಿಗಾಗಿ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿಗಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಕಾನೂನು ಪದವೀಧರರಿಗೆ ತರಬೇತಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಹಾಗೂ ಅರ್ಹ ಹಿಂದುಳಿದ ವರ್ಗಗಳ ಕಾನೂನು ಪದವೀಧರರಿಗೆ ಈ ಕೆಳಕಂಡ ನಿಬಂಧನೆಗೊಳಪಟ್ಟು ಭರ್ತಿ ಮಾಡಿದ ಅರ್ಜಿಗಳನ್ನು ಗದಗ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿಗಳಿಗೆ ದಿನಾಂಕ: 15-10-2025 ರಂದು ಸಾಯಂಕಾಲ 5.00 ಗಂಟೆಯೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಅವಧಿ ಮೀರಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲಾ.

**ಅರ್ಹತೆ :** ತರಬೇತಿಯನ್ನು ಗದಗ ಜಿಲ್ಲೆಯಲ್ಲಿಯೇ ನೀಡಲಾಗುವುದು. ಅಭ್ಯರ್ಥಿಗಳು ಗದಗ ಜಿಲ್ಲೆಯವರಾಗಿರಬೇಕು. ಗದಗ ಜಿಲ್ಲೆಯ ಒಟ್ಟು 10 ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ತರಬೇತಿಗೆ ಆಯ್ಕೆ ಮಾಡಲಾಗುವುದು. ಕಾನೂನು ತರಬೇತಿ ಪಡೆಯುವ ಅಭ್ಯರ್ಥಿಯು ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ, 3ಬಿ, ವರ್ಗಗಳಿಗೆ ಸೇರಿದ ಸಮುದಾಯದವರಾಗಿರಬೇಕು.

ಅಭ್ಯರ್ಥಿಯ ಕುಟುಂಬದ ವಾರ್ಷಿಕ ಆದಾಯ ಪ್ರವರ್ಗ-1 ರೂ 3.50 ಲಕ್ಷ ಇತರೆ ವರ್ಗ ರೂ 2.50 ಲಕ್ಷ ಒಳಗಿರಬೇಕು. ತರಬೇತಿ ಅವಧಿ 4 ವರ್ಷಗಳಾಗಿದ್ದು, ಆಯ್ಕೆಗೊಂಡ ಅಭ್ಯರ್ಥಿಗಳಿಗೆ ತರಬೇತಿ ಅವಧಿಯಲ್ಲಿ ರೂ 4,000/- ಮಾಹೆಯಂತೆ ತರಬೇತಿ ಭತ್ಯೆ ನೀಡಲಾಗುವುದು. ಅಭ್ಯರ್ಥಿಗಳನ್ನು ಜಿಲ್ಲಾ ಮಟ್ಟದಲ್ಲಿ ಆಯ್ಕೆ ಸಮಿತಿಯಿಂದ ಸಂದರ್ಶನದ ಮೂಲಕ ಆಯ್ಕೆಮಾಡಲಾಗುವುದು.

ಅಭ್ಯರ್ಥಿಗಳು, ಅರ್ಜಿಯ ಜೊತೆಗೆ ಅವರ ವಯಸ್ಸನ್ನು ಧೃಡಿಕರಿಸುವ ಎಸ್.ಎಸ್.ಎಲ್.ಸಿ.ಅಂಕಪಟ್ಟಿ, ಅಥವಾ ಶಾಲಾ ಪ್ರಮಾಣ ಪತ್ರ ಪದವಿ ಹಾಗೂ ಕಾನೂನು ಪದವಿಯಲ್ಲಿ ಪಡೆದ ಅಂಕಪಟ್ಟಿ, ಪ್ರಮಾಣ ಪತ್ರದ ಧೃಡೀಕರಣ ಪ್ರತಿಗಳನ್ನು ಲಗತ್ತಿಸಬೇಕು ಅಭ್ಯರ್ಥಿಯ ವಯಸ್ಸು ಅರ್ಜಿ ಸ್ವಿಕರಿಸುವ ಕೊನೆಯ ದಿನಾಂಕಕ್ಕೆ ಪ್ರವರ್ಗ-1ಕ್ಕೆ 40ವರ್ಷ ಮತ್ತು ಇತರೆ ವರ್ಗಕ್ಕೆ 38 ವರ್ಷಗಳು ಮೀರಿರಬಾರದು. ಅಭ್ಯರ್ಥಿಯು ಬಾರ ಕೌನ್ಸಿಲನಲ್ಲಿ ತಮ್ಮ ಹೆಸರನ್ನು ನೋಂದಾಯಿಸಿರಬೇಕು ಹಾಗೂ ತರಬೇತಿಗೆ ಅರ್ಜಿಯನ್ನು ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕಕ್ಕೆ ಹಿಂದೆ 2 ವರ್ಷಗಳೊಳಗಾಗಿ ಕಾನೂನು ಪದವಿಯಲ್ಲಿ ಉತ್ತೀರ್ಣರಾಗಿರಬೇಕು.

ಆಯ್ಕೆಯಾದ ಅಭ್ಯರ್ಥಿಗಳನ್ನು ಜಿಲ್ಲಾ ಪಬ್ಲಿಕ್ ಪ್ರಾಸಿಕ್ಯೂಟರ್ ಸರ್ಕಾರಿ ವಕೀಲರು ಅಥವಾ ಕನಿಷ್ಠ 20 ವರ್ಷಗಳ ವಕೀಲ ವೃತ್ತಿಯಲ್ಲಿ ಅನುಭವವುಳ್ಳ ಯಾವುದೇ ವಕೀಲರ ಆಧೀನದಲ್ಲಿ ತರಬೇತಿಗೆ ನಿಯೋಜಿಸಲಾಗುವುದು. ತರಬೇತಿ ಅವಧಿ 4 ವರ್ಷಗಳಾಗಿದ್ದು, ತರಬೇತಿಯನ್ನು ಮಧ್ಯದಲ್ಲಿ ಬಿಡಬಾರದು ತರಬೇತಿ ಅವಧಿಯಲ್ಲಿ ರಾಜ್ಯ/ಕೇಂದ್ರ ಸರ್ಕಾರದ ಸೇವೆಗೆ ನೇಮಕವಾದಲ್ಲಿ ಈ ಷರತ್ತು ಅನ್ವಯಿಸುವುದಿಲ್ಲಾ. ಅಭ್ಯರ್ಥಿಗಳು ಸುಳ್ಳು ದಾಖಲೆ ಸಲ್ಲಿಸಿದ್ದಲ್ಲಿ ಅವರ ವಿರುದ್ಧ ಕಾನೂನು ಪ್ರಕಾರ ಕ್ರಮ ಜರುಗಿಸಲಾಗುವುದು. ಅಲ್ಲದೇ ಅವರಿಗೆ ನೀಡುತ್ತಿರುವ ತರಬೇತಿ ಭತ್ಯೆಯನ್ನು ಶೇ 10%ರಷ್ಟು ಬಡ್ಡಿಯೊಂದಿಗೆ ವಸೂಲು ಮಾಡಲಾಗುವುದು. ಯಾವುದೇ ಹಣ ಬಾಕಿ ಇದ್ದಲ್ಲಿ ಭೂ ಕಂದಾಯದ ಬಾಕಿ ವಸೂಲಿ ಮಾಡುವ ರೀತಿಯಲ್ಲಿ ಹಣ ವಸೂಲು ಮಾಡಲಾಗುವುದು. ಅಪೂರ್ಣವಾದ ಹಾಗೂ ನಿಗದಿಪಡಿಸಿದ ದಿನಾಂಕಕ್ಕೆ ಮೀರಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲಾ.

ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಆಡಳಿತ ಭವನ ಕೊಠಡಿ ಸಂಖ್ಯೆ-208 ಹುಬ್ಬಳ್ಳಿ ರೋಡ್ ಕಚೇರಿ ವೇಳೆಯಲ್ಲಿ ಸಂಪರ್ಕಿಸಲು ಪ್ರಕಟಣೆಯಲ್ಲಿ ಕೋರಲಾಗಿದೆ.



ಗದಗ ನಗರದ ಮುಳಗುಂದನಾಕಾ ಬಳಿಯ ಶ್ರೀಅಡವೀಂದ್ರಸ್ವಾಮಿ ಮಠದಲ್ಲಿ ಸೆ. 22ರಂದು ಜರುಗುವ 45ನೇ ವರ್ಷದ ದಸರಾ ಮಹೋತ್ಸವ, ಘಟಸ್ಥಾಪನೆ ಮತ್ತು ಶ್ರೀದೇವಿ ಪುರಾಣ ಪ್ರಾರಂಭೋತ್ಸವದ ಉದ್ಘಾಟಕರಾದ ಶುಭ್ ಜುವೆಲ್ಲರ್ಸ್ ಮಾಲೀಕರಾದ ಪೂಜಾ ಕಿರಣ ಭೂಮಾ ಹಾಗೂ ದತ್ತಾ ಪ್ರಾಪರ್ಟಿಸ್ ವ್ಯವಸ್ಥಾಪಕರಾದ ಕಿರಣ ಪ್ರಕಾಶ ಭೂಮಾ ಅವರನ್ನು ಶ್ರೀಅನ್ನಪೂರ್ಣೇಶ್ವರಿ ದೇವಿ ಜಾತ್ರಾ ಮಹೋತ್ಸವ ಸಮಿತಿಯ ಕಾರ್ಯದರ್ಶಿ ಗೀತಾ ಹೂಗಾರ, ಸದಸ್ಯರಾದ ಜಯಶ್ರೀ ವಸ್ತ್ರದ, ಶಿವಪ್ರಭು ನೀಲಗುಂದ, ಅಶ್ವಿನಿ ನೀಲಗುಂದ ಅವರು ಸನ್ಮಾನಿಸಿ, ಆಮಂತ್ರಣ ನೀಡಿದರು.

# ಬಸನಗೌಡ ಪಾಟೀಲ್ ಯತ್ನಾಳ್ ಬಂಧನಕ್ಕೆ ಆಗ್ರಹ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಮೈಸೂರಿನ ಚಾಮುಂಡಿ ಬೆಟ್ಟದಲ್ಲಿ ದಸರಾ ಉದ್ಘಾಟನೆಯ ಬಗ್ಗೆ ವಿಜಯಪುರ ಶಾಸಕ ಬಸನಗೌಡ ಯತ್ನಾಳ್ ಮಾತನಾಡುವಾಗ ಮೈಸೂರು ದಸರಾದಲ್ಲಿ ಸನಾತನ ಧರ್ಮದವರು ಮಾತ್ರ ಚಾಮುಂಡಿ ದೇವಿಗೆ ಹೂ ಮುಡಿಸಬೇಕು. ಹೊರತು ಒಬ್ಬ ಸಾಮಾನ್ಯ ದಲಿತ ಹೆಣ್ಣು ಮಕ್ಕಳಿಗೆ ಅವಕಾಶ ಇಲ್ಲ ಎಂದು ಹೇಳುವ ಮೂಲಕ ಇಡೀ ರಾಜ್ಯದ ದಲಿತ ಮಹಿಳೆಯರಿಗೆ ಅವಮಾನ ಮಾಡಿದ್ದು, ಕೂಡಲೇ ಅವರನ್ನು ಬಂಧಿಸುವಂತೆ ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ ಮಹಿಳಾ ವಿಭಾಗ ರಾಜ್ಯಾಧ್ಯಕ್ಷೆ ಸಬಿಹಾ ಪಟೇಲ್ ಅಗ್ರಹಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಇಂತಹ ಕೊಳಕು ಮನಸ್ಥಿತಿಯ ಮತ್ತು ಕೋಮು ಸಂಘರ್ಷದ, ಪ್ರಚೋದನಕಾರಿ ಹೇಳಿ ನೀಡಿರುವ ಇವರನ್ನು ವಿಡಿಯೋ ಆಧಾರದ ಮೇಲೆ ಎಸ್ಸಿ ದೌರ್ಜನ್ಯ ಕಾಯ್ದೆಯ ಅಡಿಯಲ್ಲಿ ಬಂಧಿಸಿ ಜೈಲಿಗೆ ಕಳಿಸಬೇಕು ಎಂದಿದ್ದಾರೆ.

ಶಾಸಕ ಬಸವನಗೌಡ ಯತ್ನಾಳ ಅವರು ದಲಿತರ, ಅಲ್ಪಸಂಖ್ಯಾತ ಮಹಿಳೆಯರಿಗೆ ಅವಮಾನ ಮಾಡುವ ರೀತಿಯಲ್ಲಿ ಹೇಳಿಕೆಗಳನ್ನು ನಿರಂತರವಾಗಿ ಕೊಡುತ್ತಿದ್ದಾರೆ. ಸಮಾಜದಲ್ಲಿ ಇಂಥ ಕೋಮುಪ್ರಚೋದನೆ ನೀಡಿ ಅಶಾಂತಿಗೆ ಕಾರಣರಾಗುತ್ತಿರುವ ಬಸನಗೌಡ ಪಾಟೀಲ್ ಯತ್ನಾಳ್ ಶಾಸಕತ್ವ ಸ್ಥಾನದಿಂದ ವಜಾ ಮಾಡಬೇಕು ಎಂದು ಒತ್ತಾಯಿಸಿದ್ದಾರೆ.

ಕಸಾಪ 'ಮಹಾಮಾತು' ಕಾರ್ಯಕ್ರಮದಲ್ಲಿ ಡಾ. ರಾಜಶೇಖರ ದಾನರಡ್ಡಿ

# ಶರಣರು ಸಮಾಜೋನ್ನತಿಗೆ ಶ್ರಮಿಸಿದ್ದಾರೆ

■ವಿಜಯಸಾಕ್ಷಿ ಸುದ್ದಿ, ಗದಗ

ಕನ್ನಡ ನಾಡಿನ ಶರಣರು ಸಾರ್ವಜನಿಕ ಜೀವನದ ವಿಚಾರಗಳನ್ನು ಮುನ್ನೆಲೆಗೆ ತಂದು ವೈಯಕ್ತಿಕ ಉನ್ನತಿಯೊಂದಿಗೆ ಸಮಾಜೋನ್ನತಿಗೆ ಶ್ರಮಿಸಿದ್ದಾರೆ. 17ನೇ ಶತಮಾನದಲ್ಲಿ ಷಣ್ಮುಖ ಶಿವಯೋಗಿಗಳು ಭಕ್ತಿ, ಜ್ಞಾನ, ವೈರಾಗ್ಯದ ಮೂಲಕ ಸಮಾಜದಲ್ಲಿರುವ ಅಸಮಾನತೆಯನ್ನು ತೊಡೆದು ಹಾಕಿ ಜಾತಿ, ಮತ, ಪಂಥಗಳಲ್ಲಿ ಸಾಮರಸ್ಯವನ್ನು ಮೂಡಿಸಲು ಪ್ರಯತ್ನಿಸಿದರು ಎಂದು ಪಿ.ಪಿ.ಜಿ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ರಾಜಶೇಖರ ದಾನರಡ್ಡಿ ತಿಳಿಸಿದರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಏರ್ಪಡಿಸಿದ್ದ ಸಂಶೋಧನಾ ಕೃತಿಗಳ ಪರಿಚಯ ಮಾಲಿಕೆಯಲ್ಲಿ ತಮ್ಮ ಸಂಶೋಧನಾ ಗ್ರಂಥದ ಕುರಿತು ಉಪನ್ಯಾಸ ನೀಡಿದರು.

ಬಸವಾದಿ ಶರಣರ ಪರಂಪರೆಯನ್ನು ಮುಂದುವರೆಸಿಕೊಂಡು ಬಂದು ಸುಮಾರು ಎಂಟುನೂರು ವಚನಗಳನ್ನು ರಚಿಸಿದ್ದಾರೆ. ಅವರ ವಚನಗಳಲ್ಲಿ ತತ್ವ, ಯೋಗ, ಮತ್ತು ಭಕ್ತಿಯ ಅಗಾಧತೆಯನ್ನು ಕಾಣಬಹುದಾಗಿದೆ ಎಂದು ತಿಳಿಸಿದರು.



ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಡಾ. ಬಿ.ಬಿ. ಹೊಳಗುಂದಿ ಮಾತನಾಡಿ, ಜಾಗತಿಕ ಇತಿಹಾಸದಲ್ಲಿ ಕನ್ನಡ ನಾಡಿನ ಕೊಡುಗೆ ಅಪಾರವಾಗಿದೆ. ಶರಣರು ಸಮಸಮಾಜ ನಿರ್ಮಾಣದ ಕನಸನ್ನು ಹೊಂದಿ ಮೂಢನಂಬಿಕೆಗಳನ್ನು ತೊಡೆದು ಹಾಕಲು ಪ್ರಯತ್ನಿಸಿದರು. ಸಾರ್ವಕಾಲಿಕವಾಗಿರುವ ಅವರ ಚಿಂತನೆಗಳನ್ನು ನಾವಿಂದು ಮೈಗೂಡಿಕೊಳ್ಳಬೇಕಾಗಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಕರ್ನಾಟಕ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರಾಗಿ ನೇಮಕಗೊಂಡಿರುವ ಹಿನ್ನೆಲೆಯಲ್ಲಿ ಜೆ.ಪಿ. ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಬಿ.ಬಿ. ಹೊಳಗುಂದಿ ಅವರನ್ನು ಸನ್ಮಾನಿಸಲಾಯಿತು.

ಕಿಶೋರಬಾಬು ನಾಗರಕಟ್ಟಿ ಸ್ವಾಗತಿಸಿದರು. ರಾಹುಲ ಗಿಡ್ನಂದಿ ನಿರೂಪಿಸಿದರು. ಶಶಿಕಾಂತ ಕೊರ್ಲಹಳ್ಳಿ ವಂದಿಸಿದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ತೀರಾ ವೈಯಕ್ತಿಕವೆನಿಸುವ ಆಧ್ಯಾತ್ಮಿಕ ವಿಚಾರಗಳನ್ನು ಬಹು ಜನರಿಗೆ ತಿಳಿಸಿ, ಶೋಷಣೆ ಮುಕ್ತ ಸಮಾಜಕ್ಕೆ ಶಿವಯೋಗಿಗಳು ಪ್ರಯತ್ನಿಸಿದರು. ವಚನಗಳ ವಿಚಾರಗಳನ್ನು ಅಧ್ಯಯನ ಮಾಡಿ, ಅಳವಡಿಸಿಕೊಂಡು, ಆಚರಿಸಿದರೆ ಮತ್ತೆ ಕಲ್ಯಾಣ ರಾಜ್ಯ ನೆಲೆಗೊಳ್ಳಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಈರನಗೌಡ ಮಣಕವಾಡ ಅವರು ವಚನಗಳನ್ನು ಪ್ರಸ್ತುತಪಡಿಸಿದರು.

ಕಾರ್ಯಕ್ರಮದಲ್ಲಿ ಚಂದ್ರಶೇಖರ ವಸ್ತ್ರದ, ರತ್ನಕ್ಕ ಪಾಟೀಲ, ಸಿ.ಕೆ.ಎಚ್. ಕಡಣಿಶಾಸ್ತ್ರೀ, ಡಾ. ಜಿ.ಬಿ. ಪಾಟೀಲ, ಸೈಯದ್ ಉಸ್ಮಾನ ಕೊಪ್ಪಳ, ಶಿವಾಜಿ ಕಾಂಬಳೇಕರ, ಸಿದ್ಧಲಿಂಗೇಶ ಸಜ್ಜನಶೆಟ್ಟರ, ಮಲ್ಲಪ್ಪ ಡೋಣಿ, ನಾಗಪ್ಪ ಸುರಳಿಕೇರಿ, ಶೈಲಜಾ ಗಿಡ್ನಂದಿ, ರತ್ನಾ ಪುರಂತರ, ರಶ್ಮಿ ಅಂಗಡಿ, ಅಂದಾನಯ್ಯ ಹಿರೇಮಠ, ಜಯದೇವ ಮೆಣಸಗಿ, ಕುಬೇರಪ್ಪ ಗದಗ, ಕೆ.ಎಸ್. ಗುಗ್ಗರಿ, ಸಿ.ಎಂ. ಮಾರನಬಸರಿ, ರಾಜಶೇಖರ ಕರಡಿ, ಕೆ.ಎಸ್. ಬಾಳಿಕಾಯಿ, ಎಸ್.ಎಸ್. ಪತ್ತಾರ, ಪಿ.ವಿ. ಇನಾಮದಾರ, ಚನವೀರಪ್ಪ ದುಂದೂರ, ಗಂಗಪ್ಪ ಮುದಗಲ್, ಬಿ.ಎಸ್. ಹಿಂಡಿ, ಅನ್ನದಾನಿ ಹಿರೇಮಠ, ದೇವೇಂದ್ರ ನಾಯಕ, ಪೃಥ್ವಿರಾಜ ಚವ್ಹಾಣ, ಎಸ್.ಎಲ್. ಕುಲಕರ್ಣಿ, ಕೆ.ಜಿ. ವ್ಯಾಪಾರಿ, ಅಶೋಕ ಸತ್ಯರೆಡ್ಡಿ, ಬಸವರಾಜ ತೋಟಗೇರ, ಎಂ.ಬಿ. ವಾಲ್ಮೀಕಿ, ಎಂ.ಆರ್. ನಾಯ್ಕ, ಶ್ರೀಕಾಂತ ಜಾಧವ, ಕೃಷ್ಣಾಜಿ ನಾಡಗೇರ, ಬಿ.ಎಲ್. ಚವ್ಹಾಣ, ಸತೀಶ ಚನ್ನಪ್ಪಗೌಡರ, ಡಿ.ಎಸ್. ಬಾಪುರಿ, ದತ್ತಪ್ರಸನ್ನ ಪಾಟೀಲ ಮೊದಲಾದವರು ಭಾಗವಹಿಸಿದ್ದರು.

# ಉತ್ತಮ ಸಮಾಜ ನಿರ್ಮಾಣಕ್ಕೆ ಶಿಕ್ಷಕರ ಕೊಡುಗೆ ಅನನ್ಯ



■ವಿಜಯಸಾಕ್ಷಿ ಸುದ್ದಿ, ಗದಗ

ಸದೃಢ, ಉತ್ತಮ ಸಮಾಜ ಮತ್ತು ಬಲಿಷ್ಠ ರಾಷ್ಟ್ರ ನಿರ್ಮಾಣಕ್ಕೆ ಶಿಕ್ಷಕರ ಕೊಡುಗೆ ಅನನ್ಯ ಮತ್ತು ಅಪಾರವಾದದ್ದು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ ಹೇಳಿದರು.

ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಅಡವಿಸೋಮಾಪೂರ ಸಣ್ಣ ತಾಂಡೆ ಶಾಲೆಯಲ್ಲಿ ಶಿಕ್ಷಕರ ದಿನಾಚರಣೆ ನಿಮಿತ್ತ ಶಿಕ್ಷಣ ಪ್ರೇಮಿ ಕೃಷ್ಣ ಸಕ್ರಪ್ಪ ಕಾರಬಾರಿ, ಸುಧಾ ಕೃಷ್ಣ ಕಾರಬಾರಿ ಇವರು ಶಾಲಾ ಶಿಕ್ಷಕರಿಗೆ ಏರ್ಪಡಿಸಿದ್ದ ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡಿದರು.

ಅಕ್ಷರ ದಾಸೋಹದ ಸಹ ನಿರ್ದೇಶಕ ಶಂಕರ ಹಡಗಲಿ ಮಾತನಾಡಿ, ಈ ಸಣ್ಣ ತಾಂಡಾ ಗ್ರಾಮದ ಶಿಕ್ಷಕರು ಅತ್ಯಂತ ಕ್ರಿಯಾಶೀಲರಾಗಿದ್ದು, ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡಿ ಶಾಲಾಭಿವೃದ್ಧಿಗೆ ಶ್ರಮಿಸುತ್ತಿರುವುದು ಶ್ಲಾಘನೀಯ ಎಂದರು.

ಎಸ್‌ಡಿಎಂಸಿ ಅಧ್ಯಕ್ಷೆ ಪಾರವ್ವ ಉಮೇಶ ಲಮಾಣಿ ಅಧ್ಯಕ್ಷತೆ ವಹಿಸಿದ್ದರು. ಶಿಕ್ಷಕಿ ಎಸ್.ಟಿ. ಹಳಕಟ್ಟಿ, ಪಿ.ಬಿ. ಕಿಲಬನವರ, ಕೃಷ್ಣ ಸಕ್ರಪ್ಪ ಕಾರಬಾರಿ, ಸುಧಾ ಕೃಷ್ಣ ಕಾರಬಾರಿ, ಎಫ್.ಎನ್. ಅತ್ತಿಕಟ್ಟಿ, ಲಾಲಪ್ಪ ಪವಾರ, ಉಮೇಶ ಲಮಾಣಿ, ಮಾರುತಿ ಪವಾರ, ಸಂಗೀತಾ ಮಾರುತಿ ಪವಾರ, ಸೋಮನಾಥ ಲಮಾಣಿ, ವೆಂಕಟೇಶ ರಾಠೋಡ, ಮಹಾಂತೇಶ ರಾಠೋಡ, ಸಿದ್ದಪ್ಪ ಲಮಾಣಿ, ರಾಮಜಿ ಪವಾರ, ಮಂಜಪ್ಪ ಲಕ್ಷ್ಮಣ ರಜಪೂತ, ಹೇಮಣ್ಣ ಲಮಾಣಿ, ಲಕ್ಷ್ಮಣ ಲಮಾಣಿ, ಸಿದ್ದಪ್ಪ ಜಡಿ, ಮೌನೇಶ್ ಲಮಾಣಿ, ಶಂಕ್ರವ್ವ ಲಮಾಣಿ, ಗಂಗವ್ವ ಲಮಾಣಿ, ಸರೋಜಾ ಲಮಾಣಿ, ದೇವಕ್ಕ ಲಮಾಣಿ ಮುಂತಾದವರಿದ್ದರು.

ಮುಖ್ಯ ಶಿಕ್ಷಕ ಮಲ್ಲೇಶ ಡಿ.ಎಚ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಕ್ಷೇತ್ರ ಸಂಪನ್ಮೂಲ ವ್ಯಕ್ತಿ ಸಿ.ಜಿ. ಶಿವಶಿಂಪಿಗೇರ ಸ್ವಾಗತಿಸಿದರು. ಶಿಕ್ಷಕ ಎಸ್.ಜಿ. ಅಮ್ಮಿನಭಾವಿ ವಂದಿಸಿದರು.

ರೋಟರಿ ಕ್ಲಬ್-ಜೇಂಟ್ಸ್ ಗ್ರುಪ್ ಆಫ್ ಸಖಿ ಸಹೇಲಿಯಿಂದ ಉಚಿತ ಶಸ್ತ್ರ ಚಿಕಿತ್ಸಾ ಶಿಬಿರ

# ಕಣ್ಣಿನ ರಕ್ಷಣೆಗೆ ಮೊದಲ ಆದ್ಯತೆ ಇರಲಿ

■ವಿಜಯಸಾಕ್ಷಿ ಸುದ್ದಿ, ಗದಗ

ರೋಟರಿ ಕ್ಲಬ್ ಗದಗ-ಬೆಟಗೇರಿ ಹಾಗೂ ಜೇಂಟ್ಸ್ ಗ್ರುಪ್ ಆಫ್ ಸಖಿ ಸಹೇಲಿ ಗದಗ ಜಿಲ್ಲೆ ಇವುಗಳ ಸಂಯುಕ್ತ ಆಶ್ರಯದಲ್ಲಿ ಗದುಗಿನ ರೋಟರಿ ಕ್ಲಬ್ ವೆಲ್‌ಫೇರ್ ಸೊಸೈಟಿಯಲ್ಲಿ ನೇತ್ರ ತಪಾಸಣೆ ಹಾಗೂ ಕಣ್ಣಿನಲ್ಲಿ ಮಸೂರ ಅಳವಡಿಸುವ ಶಸ್ತ್ರ ಚಿಕಿತ್ಸಾ ಶಿಬಿರ ಜರುಗಿತು.

205ನೇ ಉಚಿತ ಶಸ್ತ್ರ ಚಿಕಿತ್ಸಾ ಶಿಬಿರದ ಪ್ರಾಯೋಜಕತ್ವವನ್ನು ಗದಗ ಜೇಂಟ್ಸ್ ಗ್ರುಪ್ ಆಫ್ ಸಖಿ ಸಹೇಲಿ ಸಂಘಟನೆಯು ವಹಿಸಿಕೊಂಡಿತ್ತು. ನಿರಂತರವಾಗಿ ನಡೆಯುತ್ತಿರುವ ಕಣ್ಣಿನ ಶಸ್ತ್ರ ಚಿಕಿತ್ಸಾ ಶಿಬಿರ ಕುರಿತಾಗಿ ರೋಟರಿ ವೆಲ್‌ಫೇರ್ ಸೊಸೈಟಿ ಅಧ್ಯಕ್ಷ ಶ್ರೀಧರ ಸುಲ್ತಾನಪೂರ ಮಾತನಾಡಿ, ಕಣ್ಣು ದೇಹದ ಅತ್ಯಂತ ಸೂಕ್ಷ್ಮ ಅಂಗವಾಗಿದ್ದು, ಕಣ್ಣಿನ ರಕ್ಷಣೆಗೆ ನಮ್ಮೆಲ್ಲರ ಮೊದಲ ಆದ್ಯತೆ ಇರಲಿ. ಗದಗ-ಬೆಟಗೇರಿ ರೋಟರಿ ಕ್ಲಬ್ ನಿರಂತರವಾಗಿ ನೇತ್ರ ತಪಾಸಣೆ ಹಾಗೂ ಶಸ್ತ್ರ ಚಿಕಿತ್ಸಾ ಶಿಬಿರವನ್ನು ನಡೆಸುತ್ತಿದ್ದು, ಇದು ಬಡ ಹಾಗೂ ಮಧ್ಯಮ ವರ್ಗದವರಿಗೆ ವರದಾನವಾಗಿದೆ ಎಂದರು.




ರೋಟರಿ ಕ್ಲಬ್‌ನ ಕಾರ್ಯದರ್ಶಿ ಸುರೇಶ ಕುಂಬಾರ ಮಾತನಾಡಿ, ರೋಟರಿ ಸಂಸ್ಥೆಯು ನಿರಂತರವಾಗಿ ನಡೆಸುತ್ತಿರುವ ಕಣ್ಣಿನ ಚಿಕಿತ್ಸೆ ಪಡೆದ ಸಾವಿರಾರು ಫಲಾನುಭವಿಗಳು ಇಂದು ಆರೋಗ್ಯದಿಂದ ಇದ್ದು, ಉತ್ತಮ ದೃಷ್ಟಿ ಹೊಂದಿದ್ದಾರೆ ಎಂದರು. ಕಾರ್ಯಕ್ರಮದಲ್ಲಿ ಅಶ್ವಿನಿ ಮಾದಗುಂಡಿ, ಶಶಿಕಲಾ ಮಾಲಿಪಾಟೀಲ, ಮಾಧುರಿ ಮಾಳೆಕೊಪ್ಪ, ಅನುರಾಧಾ ಅಮಾತ್ಯೆಗೌಡರ, ಚಂದ್ರಕಲಾ ಸ್ಥಾವರಮಠ, ಸುಶ್ಮೀತಾ ವೇರ್ಣೇಕರ, ನಿರ್ಮಲಾ ಪಾಟೀಲ, ರೇಖಾ ರೊಟ್ಟಿ, ಮಧು ಕರಬಿಷ್ಟಿ, ಸುಗ್ಗಲಾ ಯಳಮಲಿ, ಶ್ರೀದೇವಿ ಮಹೇಂದ್ರಕರ, ಬಾಲಕೃಷ್ಣ ಕಾಮತ, ಡಾ. ಪ್ರದೀಪ ಉಗಲಾಟ, ಡಾ. ವಿನಯ ಟೀಕಾರೆ ಮುಂತಾದವರಿದ್ದರು.

ಶಿವಾಚಾರ್ಯ ಹೊಸಳ್ಳಿಮಠ ಸ್ವಾಗತಿಸಿದರು. ಡಾ. ಆರ್.ಜಿ. ಉಪ್ಪಿನ ನಿರೂಪಿಸಿದರು. ಚಂದ್ರಶೇಖರ ಹುಣಶೀಕಟ್ಟಿ ವಂದಿಸಿದರು. ಶಸ್ತ್ರ ಚಿಕಿತ್ಸಾ ಶಿಬಿರದಲ್ಲಿ ರುದ್ರೇಶ, ನೇತ್ರಾ, ಜ್ಯೋತಿ ದೊಡ್ಡಮನಿ, ದೀಪಾ, ಆನಂದ ಶಿಂಗ್ರಿ, ಸಹಾಯಕರಾಗಿ ಸೇವೆ ಸಲ್ಲಿಸಿದರು.

ಜೇಂಟ್ಸ್ ಗ್ರುಪ್ ಆಫ್ ಸಖಿ ಸಹೇಲಿ ಅಧ್ಯಕ್ಷೆ ಸುಮಾ ಪಾಟೀಲ ಮಾತನಾಡಿ, ಕಣ್ಣು ನಮ್ಮ ದೇಹದ ಸೂಕ್ಷ್ಮವಾದ, ಅತ್ಯಂತ ಪ್ರಮುಖವಾದ ಭಾಗವಾಗಿದೆ. ಇವುಗಳ ಆರೈಕೆ ಅತೀ ಮುಖ್ಯವಾಗಿದೆ. ವಿಟಾಮಿನ್ ಸಿ ಇರುವ ಆಹಾರ ಪದಾರ್ಥಗಳ ಸೇವನೆಯಿಂದ ಕಣ್ಣಿನ ಪೊರೆ ಬರುವದನ್ನು ತಡೆಗಟ್ಟಬಹುದು. ಮುಖ್ಯವಾಗಿ ತಜ್ಞ ವೈದ್ಯರ ಭೇಟಿ, ಸೂಕ್ತ ಚಿಕಿತ್ಸೆ ಮೂಲಕ ಕಣ್ಣಿನ ರಕ್ಷಣೆ ಮಾಡಿಕೊಳ್ಳಬೇಕು ಎಂದರು.

# ಸುಕ್ಮಾದಲ್ಲಿ ಪೊಲೀಸ್ ಎನ್‌ಕೌಂಟರ್; ಮಹಿಳಾ ಮಾವೋವಾದಿ ಹತ್ಯೆ

■ವಿಜಯಸಾಕ್ಷಿ ಸುದ್ದಿ, ಛತ್ತೀಸ್‌ಗಢ

ಛತ್ತೀಸ್‌ಗಢದ ಸುಕ್ಮಾ ಜಿಲ್ಲೆಯಲ್ಲಿ ಗುರುವಾರ ಭದ್ರತಾ ಪಡೆಗಳೊಂದಿಗೆ ನಡೆದ ಎನ್‌ಕೌಂಟರ್‌ನಲ್ಲಿ ಒಂಬತ್ತು ಪ್ರಕರಣಗಳಿಗೆ ಸಂಬಂಧಿಸಿದಂತೆ ಬೇಕಾಗಿದ್ದ, 5 ಲಕ್ಷ ರೂ. ಬಹುಮಾನ ಹೊಂದಿದ್ದ ಮಹಿಳಾ ನಕ್ಸಲ್ ಸಾವನ್ನಪ್ಪಿದ್ದಾರೆ.

ಎನ್‌ಕೌಂಟರ್ ಸ್ಥಳದಿಂದ 35 ವರ್ಷದ ಬುಸ್ಕಿ ನುಪ್ಪನ್ ಎಂದು ಗುರುತಿಸಲಾದ ಮಹಿಳೆಯ ಮೃತದೇಹವನ್ನು ರೈಫಲ್, ದೊಡ್ಡ ಪ್ರಮಾಣದ ಸ್ಫೋಟಕ ವಸ್ತುಗಳು ಮತ್ತು ಇತರ ವಸ್ತುಗಳೊಂದಿಗೆ ವಶಪಡಿಸಿಕೊಳ್ಳಲಾಗಿದೆ.

ಅರಣ್ಯದ ಗುಡ್ಡಗಾಡು ಪ್ರದೇಶದಲ್ಲಿ ನಕ್ಸಲರ ಉಪಸ್ಥಿತಿಯ ಬಗ್ಗೆ ಗುಪ್ತಚರ ಮಾಹಿತಿಯ ನಂತರ ಕಾರ್ಯಾಚರಣೆ ಪ್ರಾರಂಭವಾಯಿತು ಎಂದು ಪೊಲೀಸರು ತಿಳಿಸಿದ್ದಾರೆ.

# ಪದವಿಪೂರ್ವ ಕಾಲೇಜಿನ 'ಎ' ವಲಯ ಕ್ರೀಡಾಕೂಟ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯಿತಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಮನೋರಮಾ ಸ್ವತಂತ್ರ ಪದವಿಪೂರ್ವ ಕಾಲೇಜುಗಳ ಸಹಯೋಗದಲ್ಲಿ ಗದಗ ತಾಲೂಕಾ ಪದವಿಪೂರ್ವ ಕಾಲೇಜಿನ 'ಎ' ವಲಯ ಕ್ರೀಡಾಕೂಟ ಜರುಗಿತು.

ಕಾರ್ಯಕ್ರಮ ಉದ್ಘಾಟನೆಯನ್ನು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಪದವಿಪೂರ್ವ ಉಪನಿರ್ದೇಶಕ ಎಸ್.ಜಿ. ಮಸನಾಯಕ ನೆರವೇರಿಸಿ ಮಾತನಾಡಿ, ವಿದ್ಯಾರ್ಥಿಗಳಿಗೆ ಕ್ರೀಡೆ ಅವಶ್ಯಕ. ಬದುಕಿನಲ್ಲಿ ಶಿಸ್ತು, ಸಂಯಮ ಕಲಿಸುವುದರೊಂದಿಗೆ ಕ್ರಮಬದ್ಧತೆಯನ್ನು ರೂಢಿಸುತ್ತದೆ. ವಿದ್ಯಾರ್ಥಿಗಳು ಕ್ರೀಡೆಯಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಜ್ಞಾನ, ಆಸಕ್ತಿ ಬೆಳೆಸಿಕೊಳ್ಳಿ ಎಂದರು.

ಮನೋರಮಾ ಕಾಲೇಜಿನ ಪ್ರಾಚಾರ್ಯರಾದ ಬಿ.ಎಸ್. ಹಿರೇಮಠ ಸ್ವಾಗತಿಸಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಮನೋರಮಾ ಸಂಸ್ಥೆಯ ಚೇರಮನ್ ಎನ್.ಎಮ್. ಕುಡತರಕರ ಕ್ರೀಡಾಪಟುಗಳಿಗೆ ಶುಭ ಕೋರಿದರು. ಈ ಸಂದರ್ಭದಲ್ಲಿ ಜಿಲ್ಲಾ ಕ್ರೀಡಾ ಸಂಚಾಲಕರಾದ ಎಚ್.ಎಸ್ ಶಿವಪ್ಪಯ್ಯನಮಠ, ಮನೋರಮಾ ಕಾಲೇಜಿನ ಆಡಳಿತಾಧಿಕಾರಿ ನಂದಕಿಶೋರ ಮುದಗಲ್ಲ, ಕಾರ್ಯದರ್ಶಿ ಮಂಜುನಾಥ ಕುಡತರಕರ, ದೈಹಿಕ ಉಪನ್ಯಾಸಕ ಖಯುಮ ನವಲೂರ, ವಿವಿಧ ಕಾಲೇಜಿನ ಪ್ರಾಚಾರ್ಯರು, ಉಪನ್ಯಾಸಕರು, ದೈಹಿಕ ನಿರ್ದೇಶಕರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.



# ನರ್ಸಿಂಗ್ ವಿದ್ಯಾರ್ಥಿಗಳಿಗೆ ಕಾರ್ಯಾಗಾರ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಸಂಕನೂರ ಇನ್ಸ್ಟಿಟ್ಯೂಟ್ ಆಫ್ ನರ್ಸಿಂಗ್ ಕಾಲೇಜನಲ್ಲಿ ನರ್ಸಿಂಗ್‌ನ 6ನೇ ಸೆಮಿಸ್ಟರ್‌ನ ವಿದ್ಯಾರ್ಥಿಗಳಿಗೆ ಒಂದು ದಿನದ ನವಜಾತ ಶಿಶು ಮತ್ತು ಬಾಲ್ಯದ ಕಾಯಿಲೆಗಳ ಸಮಗ್ರ ನಿರ್ವಹಣೆಯ ಕುರಿತು ಕಾರ್ಯಾಗಾರ ಏರ್ಪಡಿಸಲಾಗಿತ್ತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಸ್‌ಎಚ್‌ಆರ್‌ಸಿ ನಿರ್ದೇಶಕರಾದ ಡಾ. ಶ್ವೇತಾ ಸಂಕನೂರ ವಹಿಸಿದ್ದರು. ಸಂಪನ್ಮೂಲ ವ್ಯಕ್ತಿಗಳಾಗಿ ಡಾ. ಶಿಲ್ಪಾ, ಡಾ. ವೆಂಕಟೇಶ ಆಗಮಿಸಿ ಐಎಮ್‌ಎನ್‌ಸಿಐ ಕುರಿತು ಉಪನ್ಯಾಸ ನೀಡಿ, ರೋಗ ಲಕ್ಷಣಗಳನ್ನು ಕಂಡುಹಿಡಿಯುವ ಬಗೆ, ಮಕ್ಕಳ ಆರೋಗ್ಯ ಪರೀಕ್ಷೆ ಮಾಡುವ ಬಗೆ, ನೀಡಬೇಕಾದ ಚಿಕಿತ್ಸೆಯ ವಿವರಗಳನ್ನು ಸವಿಸ್ತಾರವಾಗಿ ತಿಳಿಸಿದರು.

ಕಾರ್ಯಾಗಾರದ ಸಂಘಟನಾ ಕಾರ್ಯದರ್ಶಿ ವಿನ್ಸಂಟ ಪಾಟೀಲ ಮಾತನಾಡಿದರು. ಸಹ ಸಂಘಟನಾ ಕಾರ್ಯದರ್ಶಿ ರಶ್ಮೀ ಪಾಟೀಲ ಉಪನ್ಯಾಸ ನೀಡಿದರು. ಕವಿತಾ ಪವಾರ ಮಕ್ಕಳ ಅನಾರೋಗ್ಯದ ಸಮಯದಲ್ಲಿ ಪೋಷಕರಿಗೆ ನೀಡಬೇಕಾದ ಸಲಹೆಗಳ ಕುರಿತ ಉಪನ್ಯಾಸ ನೀಡಿದರು. ಪ್ರಿಯಂಕಾ ಬಾರಾಟಕ್ಕೆ ಸ್ವಾಗತಿಸಿದರು. ಕಾರ್ಯಕ್ರಮದಲ್ಲಿ ಸಂಕನೂರ ನರ್ಸಿಂಗ್ ಕಾಲೇಜಿನ ವಿದ್ಯಾರ್ಥಿಗಳು, ಕಾಲೇಜಿನ ಉಪನ್ಯಾಸಕರು ಮತ್ತು ಸಿಬ್ಬಂದಿ ವರ್ಗದವರು ಪಾಲ್ಗೊಂಡಿದ್ದರು.

# ಮೈಕ್ರೋ ಫೈನಾನ್ಸ್ ಜಾಗೃತಿ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಡಂಬಳ

ಪ್ರತಿಯೊಬ್ಬರೂ ಜೀವನದಲ್ಲಿ ಆರ್ಥಿಕ ಸಾಕ್ಷರತೆ ಹೊಂದಿರಬೇಕು. ಸಮಸ್ಯೆಯ ಸುಳಿಯಲ್ಲಿ ಸಿಲುಕಿಕೊಳ್ಳಬಾರದು ಎನ್ನುವ ಹಿನ್ನೆಲೆಯಲ್ಲಿ ಕರ್ನಾಟಕ ಕಿರು (ಮೈಕ್ರೋ) ಸಾಲ ಮತ್ತು ಸಣ್ಣ ಸಾಲ ಅನಿಯಂತ್ರಿತ ಘಟಕಗಳ ಕಾರ್ಯಾಚರಣೆಯನ್ನು ನಿಯಂತ್ರಿಸಲು ಉದ್ದೇಶ ಹೊಂದಲಾಗಿದೆ ಎಂದು ಮೈಕ್ರೋ ಫೈನಾನ್ಸ್ ಇಂಡಸ್ಟ್ರಿ ನೆಟ್‌ವರ್ಕ್ ಉಪಾಧ್ಯಕ್ಷ ಮಂಜುನಾಥ ಎಂ.ಎಸ್ ಹೇಳಿದರು.



ಡಂಬಳ ಗ್ರಾಮದಲ್ಲಿ ಚೈತನ್ಯ ಇಂಡಿಯಾ ಫಿನ್‌ಕ್ರೆಡಿಟ್ ಪ್ರೈ. ಲಿ ನೇತೃತ್ವದಲ್ಲಿ ಮೈಕ್ರೋ ಫೈನಾನ್ಸ್ ಇಂಡಸ್ಟ್ರಿ ನೆಟ್‌ವರ್ಕ್, ಭಾರತೀಯ ರಿಸರ್ವ್ ಬ್ಯಾಂಕ್‌ನಿಂದ ಮಾನ್ಯತೆ ಪಡೆದ ಎನ್‌ಬಿಎಫ್‌ಸಿ ಮೈಕ್ರೋಫೈನಾನ್ಸ್ ಸಂಸ್ಥೆಗಳ ಸ್ವಯಂ ನಿಯಂತ್ರಣ ಸಂಸ್ಥೆಗಳ ಮೈಕ್ರೋ ಫೈನಾನ್ಸ್ ಜಾಗೃತಿ ಮತ್ತು ಆರ್ಥಿಕ ಸಲಹಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಗ್ರಾಮೀಣ ಜನರಿಗೆ ಆರ್ಥಿಕ ವಿಷಯಗಳ ಬಗ್ಗೆ ತಿಳುವಳಿಕೆ ನೀಡುವುದು, ಔಪಚಾರಿಕ ಹಣಕಾಸು ಸಂಸ್ಥೆಗಳ ಅರಿವು ಮೂಡಿಸುವುದು ಹಾಗೂ ಜವಾಬ್ದಾರಿಯುತ ಸಾಲ ಹೂಡಿಕೆ ಪದ್ಧತಿಗಳನ್ನು ಉತ್ತೇಜಿಸುವುದು ಕಾರ್ಯಕ್ರಮದ ಉದ್ದೇಶವಾಗಿದೆ. ಅಲ್ಲದೆ ಸೂಕ್ಷ್ಮ ಸಾಲ ಮತ್ತು ಸಣ್ಣ ಸಾಲ ಬಲವಂತದ ಕ್ರಮಗಳ ತಡೆಗಟ್ಟುವಿಕೆ, ಸುಗ್ರೀವಾಜ್ಞೆ 2025 ಅನ್ವಯಿಸುವಿಕೆ, ಆರ್‌ಬಿಐ ನಿಯಂತ್ರಿತ ರಾಜ್ಯ ನೋಂದಾಯಿತ ಹಾಗೂ ನೋಂದಾಯಿಸದ ಹಣಕಾಸು ಸಂಸ್ಥೆಗಳ ವ್ಯತ್ಯಾಸ, ಮೈಕ್ರೋಫೈನಾನ್ಸ್‌ನ ಗುಣಲಕ್ಷಣಗಳು, ಆರ್‌ಬಿಐ ಮಾರ್ಗಸೂಚಿಗಳು, ಉಳಿತಾಯ, ಹೂಡಿಕೆ, ವಿಮಾ ಯೋಜನೆಗಳು, ವಂಚನೆ ತಡೆಗಟ್ಟುವಿಕೆ ಮತ್ತು ಮೂರು ಹಂತದ ಗ್ರಾಹಕ ಕುಂದುಕೊರತೆ ಪರಿಹಾರ ವ್ಯವಸ್ಥೆ ಮುಂತಾದ ವಿಷಯಗಳ ಕುರಿತು ಮಾಹಿತಿ ನೀಡಿದರು.

ಸಲಹೆಗಾರ ಸಂದೀಪ್ ಕಟ್ಟಿ ಬಜೆಟ್ ನಿರ್ವಹಣೆ, ಹೂಡಿಕೆ, ಸಾಲದ ಆಯ್ಕೆಗಳು ಮತ್ತು ವಂಚನೆ ತಡೆಗಟ್ಟುವ ಕ್ರಮಗಳ ಬಗ್ಗೆ ಉಪನ್ಯಾಸ ನೀಡಿದರು. ಚೈತನ್ಯ ಇಂಡಿಯಾ ಫಿನ್‌ಕ್ರೆಡಿಟ್ ವಿಭಾಗೀಯ ವ್ಯವಸ್ಥಾಪಕ ವೀರೇಶ್, ಬಜಾಜ್ ಫೈನಾನ್ಸ್ ಪ್ರಾದೇಶಿಕ ವ್ಯವಸ್ಥಾಪಕ ಅಪ್ಪಣ್ಣ ಹಂಪಣ್ಣವರ್ ಮಾತನಾಡಿದರು.

# ನಿಧನ

## ವೀರಯ್ಯ ಮಠಪತಿ



**ಮುಳಗುಂದ:** ಪಟ್ಟಣದ ಸಮೀಪದ ಸೊರಟೂರ ಗ್ರಾಮದ ನಿವೃತ್ತ ಶಿಕ್ಷಕ ವೀರಯ್ಯ ಮಠಪತಿ (91) ಬುಧವಾರ ನಿಧನರಾದರು. ಮೃತರು ಪತ್ನಿ, ಓರ್ವ ಪುತ್ರ, ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧು-ಬಳಗ ಅಗಲಿದ್ದಾರೆ.

# ಗದಗ ಬಳಿ ಭೀಕರ ಅಪಘಾತ; ಇಬ್ಬರು ಪೊಲೀಸರು ಸೇರಿ ಮೂವರು ಸ್ಥಳದಲ್ಲೇ ಸಾವು!



■ವಿಜಯಸಾಕ್ಷಿ ಸುದ್ದಿ, ಗದಗ

ಕಾರು ಪಲ್ಟಿಯಾಗಿ ಬಸ್ ಗೆ ಡಿಕ್ಕಿಹೊಡೆದ ಪರಿಣಾಮ ಇಬ್ಬರು ಪೊಲೀಸರು ಸೇರಿ ಮೂವರು ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ಗದಗ ತಾಲೂಕಿನ ಹರ್ಲಾಪೂರ ಗ್ರಾಮದ ರಾಷ್ಟ್ರೀಯ ಹೆದ್ದಾರಿಯಲ್ಲಿ ಜರುಗಿದೆ.

ಕೊಪ್ಪಳ ಕಡೆಯಿಂದ ಗದಗ ಕಡೆಗೆ ಕಾರು ಬರುತ್ತಿತ್ತು. ಹೊಸಪೇಟೆ ಕಡೆಗೆ ಹೊರಟಿದ್ದ ಗೋವಾ ಪಾಸಿಂಗ್ ಇರುವ ಬಸ್ ಗೆ ರೋಡ್ ಡಿವೈಡರ್ ದಾಟಿ ಬಂದು ಕಾರು ಡಿಕ್ಕಿ ಹೊಡೆದಿದೆ. ಪರಿಣಾಮ ಕಾರಿನಲ್ಲಿದ್ದ ಮೂವರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.

ಮೃತರು ಹಾವೇರಿ ಮೂಲದವರೆಂಬ ಮಾಹಿತಿಯನ್ನು ಪೊಲೀಸರು ತಿಳಿಸಿದ್ದು, ಅಪಘಾತದ ರಭಸಕ್ಕೆ ಕಾರು ನಜ್ಜು ಗುಜ್ಜಾಗಿದೆ. ಕಾರು ಚಾಲಕನ ನಿಯಂತ್ರಣ ತಪ್ಪಿ ಈ ಅಪಘಾತ ಸಂಭವಿಸಿದೆ ಎನ್ನಲಾಗಿದೆ. ಮೃತರನ್ನು ಹಾವೇರಿ ಜಿಲ್ಲೆಯಲ್ಲಿ ಜಿಲ್ಲಾ ಪೊಲೀಸ್ ಕಂಟ್ರೋಲ್ ರೂಮ್ ನಲ್ಲಿ ಪೇದೆಯಾಗಿದ್ದ ಅರ್ಜುನ್ ನೆಲ್ಲೂರು(34) ಸಹೋದರ ಸಂಬಂಧಿ ರವಿ ನೆಲ್ಲೂರು(35) ಹಾಗೂ ಕೊಪ್ಪಳ ಜಿಲ್ಲೆಯ ಪೊಲೀಸ್ ಕಂಟ್ರೋಲ್ ರೂಮ್ ನಲ್ಲಿ ಪೇದೆಯಾಗಿದ್ದ ಈರಣ್ಣ ಉಪ್ಪಾರ (38) ಎಂದು ಗುರುತಿಸಲಾಗಿದೆ.




ಸ್ಥಳಕ್ಕೆ ಗದಗ ಗ್ರಾಮೀಣ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಮೃತ ದೇಹಗಳನ್ನು ಜಿಮ್ಸ್ ಆಸ್ಪತ್ರೆಗೆ ರವಾನೆ ಮಾಡಲಾಗಿದೆ. ಗದಗ ಗ್ರಾಮೀಣ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ಜರುಗಿದೆ.

# ಗದಗ ಗಂಗಾಮತಸ್ಥರಿಗೆ ಸೂಚನೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದ ಹಲವು ಕಡೆಗಳಲ್ಲಿ 37 ಹೆಸರುಗಳಿಂದ ಕರೆಯಲ್ಪಡುವ ಅಂಬಿಗರ ಸಮಾಜ ಬಾಂಧವರು ಸಂಘಟಿತರಾಗಬೇಕಿದೆ. ಪ್ರತಿಯೊಬ್ಬರೂ ನಮ್ಮ ಜನಾಂಗದ ಇತಿಹಾಸ, ಕುಲಕಸುಬು ಮತ್ತಿತರೆ ಮಾಹಿತಿಯನ್ನು ತಿಳಿದುಕೊಂಡು ಜಾಗೃತರಾಗಬೇಕಿದೆ. ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ರಾಜ್ಯದಲ್ಲಿ ಸೆ.22ರಿಂದ ಅ.7ರವರೆಗೆ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ನಡೆಸುತ್ತಿದೆ. ಈ ಸಂದರ್ಭದಲ್ಲಿ ಅಂಬಿಗ ಕುಲಬಾಂಧವರಿಗೆ ಸರಿಯಾದ ಮಾಹಿತಿ ನೀಡಬೇಕಿದೆ.

ಕಾಲಂ ನಂ. 9ರ ಜಾತಿ ಕಾಲಂನಲ್ಲಿ 'ಬೆಸ್ತರ್' ಎಂದು ಬರೆಸಬೇಕು. ಕಾಲಂ ನಂ. 10ರಲ್ಲಿ ಉಪಜಾತಿಯಲ್ಲಿ 'ನೀವು/ನಿಮ್ಮ ಕುಟುಂಬದ /ಮಕ್ಕಳ ಜಾತಿ ಪ್ರಮಾಣದಲ್ಲಿನ ಜಾತಿಯ ಹೆಸರು' ನಮೂದಿಸಬೇಕು. ಕಾಲಂ ನಂ. 11ರಲ್ಲಿ ಜಾತಿಗೆ ಇರುವ ಇನ್ನಿತರೆ ಪರ್ಯಾಯ ಹೆಸರುಗಳ ಮುಂದೆ ಬಾರ್ಕಿ/ಕುಬ್ಬೇರ/ಗಂಗಾಮತ/ಅಂಬಿಗ/ ಸುಣಗಾರ ಎಂಬ ಹೆಸರುಗಳನ್ನು ಬರೆಸಬಹುದು.

ಸಮೀಕ್ಷೆಯ ಸಂದರ್ಭದಲ್ಲಿ ಏನಾದರೂ ನ್ಯೂನತೆಗಳು ಹಾಗೂ ವ್ಯತ್ಯಾಸಗಳು ಮತ್ತು ಮನೆಗಳಿಗೆ ಜನಗಣತಿ ಸ್ಟಿಕರ್ ಅಂಟಿಸದಿದ್ದಲ್ಲಿ ತಕ್ಷಣ ಹಿಂದುಳಿದ ವರ್ಗಗಳ ಆಯೋಗದ ಸಹಾಯವಾಣಿ 8050770004ಗೆ ಕರೆ ಮಾಡಬಹುದು. ಈ ಸಮೀಕ್ಷೆ ನಮ್ಮ ಸಮಾಜದ ಏಳಿಗೆಗೆ ಕಾರ್ಯಸೂಚಿಯಾಗಲಿದೆ ಎಂದು ಗದಗ ಜಿಲ್ಲಾ ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ವಿವಿಧೋದ್ದೇಶಗಳ ಸೇವಾ ಟ್ರಸ್ಟ್‌ನ ಅಧ್ಯಕ್ಷ ಜೆ.ಬಿ. ಗಾರವಾಡರ ಪ್ರಕಟಣೆಯ ಮೂಲಕ ತಿಳಿಸಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಮೊ-9448640866 ಸಂಪರ್ಕಿಸಲು ಕೋರಲಾಗಿದೆ.

**ಸ್ವಚ್ಛ ಭಾರತ್ ಯೋಜನೆಯ ಮಾಹಿತಿ, ಶಿಕ್ಷಣ ಸಂವಹನ ಕುರಿತು ಕಮ್ಯುನಿಟಿ ಮೊಬೈಲೈಜರ್‌ಗಳಿಗೆ ತರಬೇತಿ ಕಾರ್ಯಾಗಾರ**

# ಮಾಲಿನ್ಯ ರಹಿತ ಜಿಲ್ಲೆಯಾಗಿಸಲು ಕ್ರಮ ವಹಿಸಿ



**■ ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ನಗರ ಸೇರಿದಂತೆ ಜಿಲ್ಲೆಯನ್ನು ಪರಿಸರ ಮಾಲಿನ್ಯ ರಹಿತ ಸ್ವಚ್ಛ ಜಿಲ್ಲೆಯಾಗಿಸಲು ಸಾರ್ವಜನಿಕರಲ್ಲಿ ತಿಳುವಳಿಕೆ ನೀಡುವ ಮೂಲಕ ಕ್ರಮ ವಹಿಸಬೇಕು ಎಂದು ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ್ರ ಕೋಟೂರ ತಿಳಿಸಿದರು.

ಗದಗ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಗುರುವಾರ ಸ್ವಚ್ಛ ಭಾರತ (ನ) 2.0 ಯೋಜನೆಯ ಮಾಹಿತಿ ಶಿಕ್ಷಣ ಸಂವಹನ (ಐಇಸಿ) ಕುರಿತು ಜಿಲ್ಲಾ ಮಟ್ಟದ ಹಿರಿಯ/ಕಿರಿಯ ಆರೋಗ್ಯ ನಿರೀಕ್ಷಕರುಗಳಿಗೆ, ನೈರ್ಮಲ್ಯ ಮೇಲ್ವಿಚಾರಕರಿಗೆ, ಕಮ್ಯುನಿಟಿ ಮೊಬಲೈಜರ್‌ಗಳಿಗೆ ಹಮ್ಮಿಕೊಳ್ಳಲಾಗಿದ್ದ ಒಂದು ದಿನದ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲೆಯ ಹಿರಿಯ/ಕಿರಿಯ ಆರೋಗ್ಯ ನಿರೀಕ್ಷಕರು, ನೈರ್ಮಲ್ಯ ಮೇಲ್ವಿಚಾರಕರಿಗೆ, ಕಮ್ಯುನಿಟಿ ಮೊಬಲೈಜರ್‌ಗಳು ಸಾರ್ವಜನಿಕರಿಗೆ ಸ್ವಚ್ಛತೆಯ ಕುರಿತು ತಿಳುವಳಿಕೆ ಮೂಡಿಸಬೇಕು. ಸಾರ್ವಜನಿಕರೊಂದಿಗೆ ಸೌಜನ್ಯದಿಂದ ವರ್ತಿಸಬೇಕು. ಹಸಿ ಕಸ-ಒಣ ಕಸ ಬೇರ್ಪಡಿಸಿ ಪರಿಸರ ಮಾಲಿನ್ಯ ತಡೆಗಟ್ಟಿ ನಗರವನ್ನು ಸುಂದರ ಹಾಗೂ ಸ್ವಚ್ಛ ಜಿಲ್ಲೆಯಾಗಿಸಲು ಕ್ರಮ ಕೈಗೊಳ್ಳಬೇಕು. ಕಮರ್ಷಿಯಲ್ ಕಾಂಪ್ಲೆಕ್ಸ್, ಹೋಟೆಲ್, ಮುಖ್ಯ ಮಾರುಕಟ್ಟೆ, ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ, ಆಸ್ಪತ್ರೆಗಳು, ಕೊಳೆಗೇರಿಗಳು ಮತ್ತು ವಸತಿ ಪ್ರದೇಶಗಳಲ್ಲಿ ಭೇಟಿ ನೀಡಿ ಅಲ್ಲಿನ ಜನರಿಗೆ ಪರಿಸರ ಸ್ವಚ್ಛತೆಯ ಕುರಿತು ತಿಳುವಳಿಕೆ ನೀಡಬೇಕು ಎಂದು ತಿಳಿಸಿದರು.

ಕಾರ್ಯಾಗಾರದಲ್ಲಿ ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತ ರಾಜಾರಾಮ ಪವಾರ, ನರಗುಂದ ಪುರಸಭೆ ಮುಖ್ಯಾಧಿಕಾರಿ ಬ್ಯಾಳಿ, ಮುಳಗುಂದ ಪ.ಪಂ ಪ್ರಭಾರ ಮುಖ್ಯಾಧಿಕಾರಿ ಕೃಷ್ಣ, ರೋಣ ಪುರಸಭೆಯ ಮುಖ್ಯಾಧಿಕಾರಿ ರಮೇಶ ಹೊಸಮನಿ, ನರೇಗಲ್ ಪ.ಪಂ ಮುಖ್ಯಾಧಿಕಾರಿ ಮಹೇಶ ನಿಡಶೇಶಿ, ಶಿರಹಟ್ಟಿ ಪ.ಪಂ ಮುಖ್ಯಾಧಿಕಾರಿ ಸವಿತಾ, ಎಸ್‌ಡಬ್ಲ್ಯುಎಂ ಎಕ್ಸಪರ್ಟ್ ಕೊಟ್ರೇಶ ಹುಬ್ಬಳ್ಳಿ, ಡಿಯುಡಿಸಿ ಮ್ಯಾನೇಜರ್ ಬಸವರಾಜ ಗೂಳೇರ, ಜಿಲ್ಲೆಯ ಹಿರಿಯ/ಕಿರಿಯ ಆರೋಗ್ಯ ನಿರೀಕ್ಷಕರು, ನೈರ್ಮಲ್ಯ ಮೇಲ್ವಿಚಾರಕರು, ಕಮ್ಯುನಿಟಿ ಮೊಬಲೈಜರ್‌ಗಳು ಹಾಜರಿದ್ದರು. ನಗರಸಭೆಯ ಸಹಾಯಕ ಕಾರ್ಯಪಾಲಕ ಅಭಿಯಂತರ (ಪರಿಸರ) ಆನಂದ ಬದಿ ಮಾಹಿತಿ ಶಿಕ್ಷಣ ಸಂವಹನದ ಬಗ್ಗೆ ತಿಳುವಳಿಕೆ ನೀಡಿದರು. ತುಮಕೂರು ಸಹಾಯಕ ಕಾರ್ಯಪಾಲಕ ಅಭಿಯಂತರ (ಪರಿಸರ) ಸ್ವಚ್ಛ ಭಾರತ ಮಿಷನ್ ಯೋಜನೆಯ ಮಾರ್ಗಸೂಚಿ, ಸಮುದಾಯ ಸಜ್ಜುಗೊಳಿಸುವವರ ಪಾತ್ರ ಮತ್ತು ಜವಾಬ್ದಾರಿ, ಸಾರ್ವಜನಿಕರಿಗೆ ಸ್ವಚ್ಛತೆಯ ಬಗ್ಗೆ ಅರಿವು ಮೂಡಿಸುವ ಕುರಿತು ತಿಳುವಳಿಕೆ ನೀಡಿದರು.

ಗದಗ-ಬೆಟಗೇರಿ ನಗರಸಭೆಯ ಸಮುದಾಯ ಸಂಘಟನಾಧಿಕಾರಿ ಎಸ್.ವೈ. ಸಂಕನಗೌಡ್ರ ಸ್ವಾಗತಿಸಿ ವಂದಿಸಿದರು.

> ಎಲ್ಲರೂ ತಮ್ಮ ತಮ್ಮ ಕರ್ತವ್ಯಗಳನ್ನು ಶ್ರದ್ಧೆಯಿಂದ ಮತ್ತು ಆಸಕ್ತಿಯಿಂದ ನಿರ್ವಹಿಸಬೇಕು. ಕಾರ್ಯಕ್ಷಮತೆ ನೋಡಿಕೊಂಡು ಅಚ್ಚುಕಟ್ಟಾಗಿ ಕೆಲಸ ಮಾಡಿದವರಿಗೆ ಅಭಿನಂದನಾ ಪತ್ರವನ್ನು ಸಹ ನೀಡಲಾಗುವುದು ಎಂದು ಬಸವನಗೌಡ್ರ ಕೋಟೂರ ತಿಳಿಸಿದರು.

# ಹಿಂದೂ ಪರ ಸಂಘಟನೆಗಳಿಂದ ಸೆ.20ಕ್ಕೆ ಪ್ರತಿಭಟನೆ



**■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಹಿಂದೂ ಮುಖಂಡರುಗಳ ಮೇಲೆ ಪ್ರಕರಣ ದಾಖಲಿಸುತ್ತಿರುವುದು ಹಾಗೂ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಯಲ್ಲಿ ಉಪಜಾತಿಗಳ ಹಿಂದೆ ಕ್ರೈಸ್ತ ಎಂಬ ಉಪಜಾತಿ ಸೇರಿಸಿ ಮತಾಂತರಕ್ಕೆ ಹುನ್ನಾರ ನಡೆಸಲಾಗುತ್ತಿದೆ ಎಂದು ಶಿರಹಟ್ಟಿಯಲ್ಲಿ ಹಿಂದೂ ಪರ ಸಂಘಟನೆಗಳ ಒಕ್ಕೂಟದಿಂದ ಸೆ.20ಕ್ಕೆ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಸಂತೋಷ ಕುರಿ, ರಾಜೀವರೆಡ್ಡಿ ಬಮ್ಮನಕಟ್ಟಿ ತಿಳಿಸಿದರು.

ಶಿರಹಟ್ಟಿಯ ಪ್ರವಾಸಿ ಮಂದಿರದಲ್ಲಿ ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾಹಿತಿ ನೀಡಿ, ಇತ್ತೀಚಿನ ದಿನಗಳಲ್ಲಿ ಹಿಂದೂ ಪರ ಮುಖಂಡರ ಬಂಧನವಾಗುತ್ತಿದೆ.

ಹಿಂದೂಗಳ ಮೇಲೆ ದೌರ್ಜನ್ಯಗಳು ಹೆಚ್ಚಿವೆ. ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯಲ್ಲಿ ಉಪಜಾತಿಗಳ ಹಿಂದೆ ಕ್ರೈಸ್ತ ಎಂಬ ಉಪಜಾತಿ ಸೇರಿಸಿ ಹೊಸ ಉಪಜಾತಿ ಸೃಷ್ಟಿಸುತ್ತಿರುವುದು ಮತಾಂತರಕ್ಕೆ ಕಾರಣವಾಗುತ್ತಿರುವ ರಾಜ್ಯ ಸರ್ಕಾರದ ದಮನ ನೀತಿಯನ್ನು ಖಂಡಿಸಿ ಶಿರಹಟ್ಟಿ ತಾಲೂಕಿನ ಹಿಂದೂಪರ ಸಂಘಟನೆಗಳ ಒಕ್ಕೂಟದಿಂದ ಸೆ.20ರಂದು ಶಿರಹಟ್ಟಿ ಪಟ್ಟಣದ ಪೇಟೆ ಶ್ರೀ ಹನುಮಂತ ದೇವರ ದೇವಸ್ಥಾನದಿಂದ ತಹಸೀಲ್ದಾರ ಕಚೇರಿವರೆಗೂ ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಸಿ, ತಹಸೀಲ್ದಾರರ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಗುವುದು. ಹಿಂದೂ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ರಾಮಣ್ಣ ಕಂಬಳಿ, ಪರಶುರಾಮ ಡೊಂಕಬಳ್ಳಿ, ಅರುಣ ತಿರ್ಲಾಪೂರ, ಪ್ರಕಾಶ ಕಲ್ಯಾಣಿ, ಯಲ್ಲಪ್ಪ ಇಂಗಳಗಿ, ಮಂಜುನಾಥ ಸೊಂಟನೂರ, ಸಂತೋಷ ತೋಡೆಕಾರ, ದೇವು ಪೂಜಾರ, ಮಂಜುನಾಥ ಕಾಳಗಿ ಮುಂತಾದವರು ಉಪಸ್ಥಿತರಿದ್ದರು.

## ಶಹಾಪುರದಲ್ಲಿ ಅಕ್ಕಿ ಅಕ್ರಮ ಸಾಗಾಟ ದಂಧೆ; ಓರ್ವ ಅರೆಸ್ಟ್, 2.62 ಲಕ್ಷ ಮೌಲ್ಯದ ಅಕ್ಕಿ ಸೀಜ್

**■ ವಿಜಯಸಾಕ್ಷಿ ಸುದ್ದಿ, ಯಾದಗಿರಿ**

ಅನ್ನಭಾಗ್ಯ ಅಕ್ಕಿ ಅಕ್ರಮ ಸಾಗಾಟ ದಂಧೆಯೊಂದು ಜಿಲ್ಲೆಯ ಶಹಾಪುರ ತಾಲೂಕಿನಲ್ಲಿ ಬೆಳಕಿಗೆ ಬಂದಿದೆ.

ಪೊಲೀಸರು ಓರ್ವ ಆರೋಪಿಯನ್ನು ಅರೆಸ್ಟ್ ಮಾಡಿದ್ದು, 2.62 ಲಕ್ಷ ರೂ. ಮೌಲ್ಯದ ಅಕ್ಕಿ, ಗೂಡ್ಸ್ ವಾಹನವೊಂದನ್ನು ಸೀಜ್ ಮಾಡಿದ್ದಾರೆ. ರಾಜು ಪವಾರ್ ಬಂಧಿತ ಆರೋಪಿ. ಇನ್ನೋರ್ವ ಆರೋಪಿ ದೇವರಾಜ ರಾಠೋಡ್ ಪರಾರಿಯಾಗಿದ್ದಾನೆ.

ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ಸ್ವಕ್ಷೇತ್ರದಲ್ಲಿ ಅನ್ನಭಾಗ್ಯ ಅಕ್ಕಿ ಪತ್ತೆಯಾಗಿದೆ. ಶಹಾಪುರ ತಾಲೂಕಿನ ಗೋಗಿ ಗ್ರಾಮದ ಹೊರವಲಯದಲ್ಲಿ ಪಡಿತರ ಕಾರ್ಡ್‌ದಾರರಿಂದ ಅಕ್ಕಿ ಖರೀದಿಸಿ ಸಾಗಾಟ ಮಾಡಲಾಗ್ತಿತ್ತು. ಈ ವೇಳೆ ಆಹಾರ ನಿರೀಕ್ಷಕ ಬಸವರಾಜ್ ಹಾಗೂ ಪಿಎಸ್‌ಐ ದೇವಿಂದ್ರರೆಡ್ಡಿ ಅವರು ದಾಳಿ ನಡೆಸಿದ್ದಾರೆ. ತೆಲಂಗಾಣ ಪಾಸಿಂಗ್ ಹೊಂದಿರುವ ಗೂಡ್ಸ್ ವಾಹನದಲ್ಲಿ 2.62 ಲಕ್ಷ ರೂ. ಮೌಲ್ಯದ 158 ಚೀಲಗಳಲ್ಲಿ ಅನ್ನಭಾಗ್ಯ ಅಕ್ಕಿ ಪತ್ತೆಯಾಗಿದೆ.



ಅಂತಾರಾಷ್ಟ್ರೀಯ ಮಾಜಿ ಕ್ರಿಕೆಟ್ ಆಟಗಾರ, ಆಯ್ಕೆ ಸಮಿತಿಯ ಮಾಜಿ ಅಧ್ಯಕ್ಷ ಸುನೀಲ ಜೋಶಿಯವರಿಗೆ ಜಕ್ಕಲಿ ಡಿ.ಜಿ. ಕುಲಕರ್ಣಿಯವರ ಪರಿವಾರದವರಿಂದ ಆತ್ಮೀಯವಾಗಿ ಸನ್ಮಾನಿಸಿ, ಗೌರವಿಸಲಾಯಿತು. ಈ ಸಂದರ್ಭದಲ್ಲಿ ನ್ಯಾಯಾಂಗ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ಪರಿಮಳಾ ಕುಲಕರ್ಣಿ, ಜಯಶ್ರೀ ಕುಲಕರ್ಣಿ, ಪ.ಪೂ ಕಾಲೇಜಿನ ದೈಹಿಕ ಶಿಕ್ಷಕರಾದ ಆದಿತ್ಯ ಜೋಶಿ, ಅನಘಾ ಜೋಶಿ, ಮಣಿ ಜೋಶಿ ಉಪಸ್ಥಿತರಿದ್ದರು.

# ವಿಧಾನಸೌಧದವರೆಗೆ ಬೈಕ್ ಜಾಥಾ



**■ ವಿಜಯಸಾಕ್ಷಿ ಸುದ್ದಿ, ಧಾರವಾಡ**

ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯ ಅಂಗವಾಗಿ ಕರ್ನಾಟಕ ಕಾಲೇಜು ಮೈದಾನದಿಂದ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕ್ರೀಡಾ ಇಲಾಖೆ ಮತ್ತು ಸಮಾಜ ಕಲ್ಯಾಣ ಇಲಾಖೆಯು ಆಯೋಜಿಸಿದ್ದ ಬೈಕ್ ರ್‍ಯಾಲಿ ಕಾರ್ಯಕ್ರಮವನ್ನು ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಉದ್ಘಾಟಿಸಿದರು.

ವಿಜೇತಕುಮಾರ ಹೊಸಮತ ನಾಯಕತ್ವದಲ್ಲಿ 10 ಬೈಕ್ ರೈಡರ್‌ಗಳು ಧಾರವಾಡದಿಂದ ವಿಧಾನಸೌಧದವರೆಗೆ ಜಾಥಾ ಹಮ್ಮಿಕೊಂಡಿದ್ದರು. ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕಿ ಶುಭ ಪಿ, ಕ್ರೀಡಾ ಇಲಾಖೆಯ ಪ್ರಭಾರ ಸಹಾಯಕ ನಿರ್ದೇಶಕ ಸದಾನಂದ ಅಮರಾಪುರ ಉಪಸಿತರಿದ್ದರು.

# ಕ್ರೀಡಾಕೂಟದಲ್ಲಿ ಸಾಧನೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ವಿಜಯ ಪದವಿಪೂರ್ವ ಮಹಾವಿದ್ಯಾಲಯದ ವಿದ್ಯಾರ್ಥಿನಿ ರಂಜಿತಾ ದಾವಣಗೇರೆ ತಾಲೂಕು ಮಟ್ಟದ ವೈಯಕ್ತಿಕ ಆಟದಲ್ಲಿ ಅಮೋಘ ಸಾಧನೆ ಮಾಡಿದ್ದಾಳೆ.

400 ಮೀಟರ್ ಅಡೆತಡೆ ಓಟದಲ್ಲಿ ಪ್ರಥಮ ಸ್ಥಾನ ಹಾಗೂ ಎತ್ತರ ಜಿಗಿತದಲ್ಲಿ ದ್ವಿತೀಯ ಸ್ಥಾನ ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿ ಮಹಾವಿದ್ಯಾಲಯಕ್ಕೆ ಕೀರ್ತಿ ತಂದಿದ್ದಾಳೆ. ವಿದ್ಯಾರ್ಥಿನಿಯ ಸಾಧನೆಗೆ ಸಂಸ್ಥೆಯ ಆಡಳಿತ ಮಂಡಳಿಯ ಅಧ್ಯಕ್ಷ ಅಶೋಕ ಟಿ.ಅಕ್ಕಿ, ಕಾರ್ಯದರ್ಶಿ ಸಂತೋಷ ಅಕ್ಕಿ, ಪ್ರಭಾರ ಪ್ರಾಚಾರ್ಯರಾದ ಶಿಲ್ಪಾ ಮಲ್ಲಾಪೂರ ಹಾಗೂ ಸಿಬ್ಬಂದಿ ವರ್ಗದವರು ಶುಭ ಹಾರೈಸಿದ್ದಾರೆ.




# ಉಚಿತ ರೇಬಿಸ್ ಲಸಿಕಾ ಕಾರ್ಯಕ್ರಮ

**■ ವಿಜಯಸಾಕ್ಷಿ ಸುದ್ದಿ, ಗದಗ**

ವಿಶ್ವ ರೇಬಿಸ್ ದಿನಾಚಾರಣೆಯ ಅಂಗವಾಗಿ ರೋಟರಿ ಸಂಸ್ಥೆ ಗದಗ-ಬೆಟಗೇರಿ ಹಾಗೂ ಪಶುವೈದ್ಯಕೀಯ ಮಹಾವಿದ್ಯಾಲಯ ಗದಗ ಇವುಗಳ ಸಂಯುಕ್ತಾಶ್ರಯದಲ್ಲಿ ಗದಗ-ಬೆಟಗೇರಿ ನಗರದ ಸಾರ್ವಜನಿಕರ ಸಾಕು ಪ್ರಾಣಿಗಳಿಗೆ ಉಚಿತ ರೇಬಿಸ್ ರೋಗ ನಿರೋಧಕ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮವು ಸೆ. 20ರಂದು ಮುಂಜಾನೆ 10 ಗಂಟೆಗೆ, ಶ್ರೀಮತಿ ಉಷಾದೇವಿ ಜಿ.ಕುಷ್ಟಗಿ ರೋಟರಿ ಕಮ್ಯೂನಿಟಿ ಕೇರ್ ಸೆಂಟರ್ (ರೋಟರಿ ಐ ಕೇರ್ ಸೆಂಟರ್), ಕೆ.ಹೆಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದ ಎದುರಿಗೆ ಉಚಿತವಾಗಿ ನೀಡಲಾಗುವುದು.

ಗದಗ-ಬೆಟಗೇರಿಂಉ ಸಾರ್ವಜನಿಕರು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದು ಸಂಸ್ಥೆಯ ಅಧ್ಯಕ್ಷರಾದ ರೊ. ಡಾ. ರಾಜೇಂದ್ರ ಗಚ್ಚಿನಮಠ, ಕಾರ್ಯದರ್ಶಿಗಳಾದ ರೊ. ಸುರೇಶ ಎಸ್. ಕುಂಬಾರ, ಖಜಾಂಚಿ ರೊ. ಬಾಲಕೃಷ್ಣ ಕಾಮತ್, ಪಶುವೈದ್ಯಕೀಯ ಮಹಾವಿದ್ಯಾಲಯದ ಪ್ರಧ್ಯಾಪಕ ರೊ. ಡಾ. ವಿಜಯ ಟಿಕಾರೆ ವಿನಂತಿಸಿದ್ದಾರೆ.

**ಪಂ. ಪುಟ್ಟರಾಜ ಕವಿ ಗವಾಯಿಗಳವರ, ಮಾತೋಶ್ರೀ ಗಂಗಮ್ಮ ಸುಂಕಪ್ಪ ಮುಳಗುಂದರ 15ನೇ ಪುಣ್ಯಸ್ಮರಣೋತ್ಸವ**

# ಅನ್ನಸಂತರ್ಪಣೆ, ಸನ್ಮಾನ ಕಾರ್ಯಕ್ರಮ ಇಂದು

**■ ವಿಜಯಸಾಕ್ಷಿ ಸುದ್ದಿ, ಗದಗ**

ದಲಿತ ಯುವ ಸೇನಾ ಸಮಿತಿ ವತಿಯಿಂದ ಪಂ. ಪುಟ್ಟರಾಜ ಕವಿ ಗವಾಯಿಗಳವರ ಹಾಗೂ ಮಾತೋಶ್ರೀ ಗಂಗಮ್ಮ ಸುಂಕಪ್ಪ ಮುಳಗುಂದ ಇವರ 15ನೇ ಪುಣ್ಯಸ್ಮರಣೋತ್ಸವದ ನಿಮಿತ್ತ ಅನ್ನಸಂತರ್ಪಣೆ, ಮಹಿಳಾ ಕೂಲಿ ಕಾರ್ಮಿಕರಿಗೆ ಸನ್ಮಾನ, ಬಟ್ಟೆ ವಿತರಣೆ ಹಾಗೂ ಗಣ್ಯರಿಗೆ ಸನ್ಮಾನ ಕಾರ್ಯಕ್ರಮವನ್ನು ಸೆ.19ರ ಮುಂಜಾನೆ 11 ಗಂಟೆಗೆ ನಗರದ ಚನ್ನಮ್ಮ ಸರ್ಕಲ್ ಬಳಿಯಿರುವ ದಲಿತ ಯುವ ಸೇನೆ ಕಾರ್ಯಾಲಯದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಸಾನ್ನಿಧ್ಯವನ್ನು ಪೂಜ್ಯಶ್ರೀ ಕಲ್ಲಯ್ಯಜ್ಜನವರು, ಆಧ್ಯಾತ್ಮ ವಿದ್ಯಾಶ್ರಮದ ಪೂಜ್ಯ ಡಾ. ಶಿವಶರಣೆ ನೀಲಮ್ಮ ತಾಯಿ ಅಸುಂಡಿ ವಹಿಸಿಕೊಳ್ಳುವರು. ಸಮಾರಂಭದ ಉದ್ಘಾಟನೆಯನ್ನು ಅಪರ ಜಿಲ್ಲಾಧಿಕಾರಿ ಡಾ. ದುರುಗೇಶ ಕೆ.ಆರ್, ಆರ್.ಟಿ.ಇ. ಸೊಸೈಟಿ ಹುಲಕೋಟಿಯ ಕಾರ್ಯದರ್ಶಿ ಸಚಿನ ಡಿ.ಪಾಟೀಲ ನೆರವೇರಿಸುವರು. ಅಧ್ಯಕ್ಷತೆಯನ್ನು ಸಮಾಜ ಸೇವಕ ರಮೇಶ ಎಸ್.ಮುಳಗುಂದ ವಹಿಸಿಕೊಳ್ಳುವರು. ಮುಖ್ಯ ಅತಿಥಿಗಳಾಗಿ ಡಿವೈಎಸ್‌ಪಿ ಮುರ್ತುಜಾ ಖಾದ್ರಿ, ಎನ್.ಡಬ್ಲ್ಯೂ. ಕೆ.ಎಸ್.ಆರ್.ಟಿ.ಸಿ ಉಪಾಧ್ಯಕ್ಷ ಪೀರಸಾಬ ಕೌತಾಳ, ತೋಂಟ-ದಾರ್ಯ ಮಠದ ಆಡಳಿತಾಧಿಕಾರಿ ಎಸ್.ಎಸ್. ಪಟ್ಟಣಶೆಟ್ಟಿ, ನಗರಸಭೆ ಸದಸ್ಯ ಸುರೇಶ ಕಟ್ಟಿಮನಿ, ಎಸ್. ಎನ್. ಬಳ್ಳಾರಿ, ಪ್ರಭು ಬುರಬುರೆ, ಡಿಎಸ್‌ಎಸ್ ಜಿಲ್ಲಾ ಸಂಚಾಲಕ ವೆಂಕಟೇಶಯ್ಯ, ಜಾಮೀಯಾ ಮಸ್ಜೀದ ಅಧ್ಯಕ್ಷ ಸಾದಿಕ ನರಗುಂದ, ವಾಲ್ಮೀಕಿ ಸಮಾಜದ ಜಿಲ್ಲಾಧ್ಯಕ್ಷ ಬಸವರಾಜ ಬೆಳಧಡಿ, ಕೊರವರ ಸಮಾಜದ ಮುಖಂಡ ಮಾಯಪ್ಪ ಪೂಜಾರ, ವಿದ್ಯಾಧರ ದೊಡ್ಡಮನಿ, ಕೆ.ಪಿ.ಸಿ.ಸಿ ಕಾರ್ಯದರ್ಶಿ ನಿಸಾರ ಅಹ್ಮದ ಖಾಜಿ, ಸಣ್ಣವೆಂಕಟೇಶ ಬಿಂಕದಕಟ್ಟಿ, ಎಸ್.ಡಿ. ಮಕಾಂದಾರ ಪಾಲ್ಗೊಳ್ಳುವರು.

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ. ನಂದಾ ಹಣಬರಟ್ಟಿ ಮಹಿಳಾ ಕೂಲಿ ಕಾರ್ಮಿಕರನ್ನು ಸನ್ಮಾನಿಸುವರು. ಕೆ.ಪಿ.ಸಿ.ಸಿ ಕಾರ್ಯದರ್ಶಿ ಸುಜಾತಾ ದೊಡ್ಡಮನಿ, ಗದಗ-ಬೆಟಗೇರಿ ನಗರಸಭೆ ಸದಸ್ಯರುಗಳಾದ ವಿದ್ಯಾವತಿ ಗಡಗಿ, ಪದ್ಮಾ ಕಟಗಿ ಪಾಲ್ಗೊಳ್ಳುವರು.

ಕಾರ್ಯಕ್ರಮದಲ್ಲಿ ಸಿಪಿಐ ಎಲ್.ಕೆ. ಜೂಲಕಟ್ಟಿ, ಸಿಪಿಐ ಡಿ.ಬಿ. ಪಾಟೀಲ, ಡಾ. ಎನ್. ಎಸ್. ಬಿರಾದಾರ, ಎಂ.ಎಸ್. ಸಜ್ಜನ, ಬಸವರಾಜ ಬಳ್ಳಾರಿ, ಮಾರುತಿ ಜೊಗದಂಡಕರ ಇವರನ್ನು ಸನ್ಮಾನಿಸಲಾಗುವುದು ಎಂದು ದಲಿತ ಯುವ ಸೇನಾ ಸಮಿತಿ ಅಧ್ಯಕ್ಷ ವಿಜಯ ಎಸ್. ಮುಳಗುಂದ ಗದಗ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾಂಘಿಕ ಚಟುವಟಿಕೆಗಳ ಉದ್ಘಾಟನೆ ಸೆ. 21ಕ್ಕೆ

**■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಇಲ್ಲಿನ ಶ್ರೀ ಅನ್ನದಾನೇಶ್ವರ ಪದವಿಪೂರ್ವ ಮಹಾವಿದ್ಯಾಲಯದ 2025-26ನೇ ಸಾಲಿನ ವಿವಿಧ ಸಾಂಘಿಕ ಚಟುವಟಿಕೆಗಳ ಉದ್ಘಾಟನೆ ಹಾಗೂ ಪ್ರಥಮ ಪಿಯುಸಿ ವಿದ್ಯಾರ್ಥಿಗಳ ಸ್ವಾಗತ ಸಮಾರಂಭ ಸೆ.21ರ ಮಧ್ಯಾಹ್ನ 3ಕ್ಕೆ ಕಾಲೇಜು ಸಭಾ ಭವನದಲ್ಲಿ ಜರುಗಲಿದೆ.

ಕಾರ್ಯಕ್ರಮದ ದಿವ್ಯ ಸನ್ನಿಧಾನವನ್ನು ಹಾಲಕೆರೆ ಅನ್ನದಾನೇಶ್ವರ ಮಠದ ಪೀಠಾಧಿಪತಿ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು ವಹಿಸಲಿದ್ದಾರೆ. ಉದ್ಘಾಟನೆಯನ್ನು ರೋಣ ಶಾಸಕ ಹಾಗೂ ಎಸ್‌ಎವಿವಿಪಿ ಸಮಿತಿಯ ಉಪಾಧ್ಯಕ್ಷ ಜಿ.ಎಸ್. ಪಾಟೀಲ ನೆರವೇರಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ, ಹುಬ್ಬಳ್ಳಿ ಶಹರ ದಕ್ಷಿಣ ವಲಯದ ಎಸಿಪಿ ಉಮೇಶ ಚಿಕ್ಕಮಠ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಸಿದ್ಧಲಿಂಗ ಬಂಡು ಮಸನಾಯಿಕ, ಕಾಲೇಜು ಆಡಳಿತ ಮಂಡಳಿಯ ಚೇರಮನ್ ಎಂ.ಜಿ. ಸೋಮನಕಟ್ಟಿ, ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ, ಎಸ್.ಎ.ವಿ.ವಿ.ಪಿ ಸಮಿತಿಯ ಆಡಳಿತಾಧಿಕಾರಿ ಎನ್.ಆರ್. ಗೌಡರ, ಶಾಲಾ ಅಭಿವೃದ್ಧಿ ಸಮಿತಿಯ ಸದಸ್ಯರುಗಳಾದ ಬಸವರಾಜ ಕಳಕಣ್ಣವರ, ಎಂ.ಪಿ. ಪಾಟೀಲ, ಮಲ್ಲಣ್ಣ ಶಿರ್ಶಿ, ಶೈಕ್ಷಣಿಕ ಸಲಹೆಗಾರ ಬಿ.ಎಸ್. ಗೌಡರ, ಪ್ರಾಚಾರ್ಯ ವೈ.ಸಿ. ಪಾಟೀಲ ಭಾಗವಹಿಸಲಿದ್ದಾರೆ ಎಂದು ಸಾಂಸ್ಕೃತಿಕ ವಿಭಾಗದ ಮುಖ್ಯಸ್ಥ ಪ್ರಭುರಾಜ ಕರಮುಡಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗ್ರಾಮ ಪಂಚಾಯತ ಕಾರ್ಯಾಲಯ ಬೆಳ್ಳಟ್ಟಿ

**ತಾಲೂಕ:-** ಶಿರಹಟ್ಟಿ | **ಜಿಲ್ಲಾ:-** ಗದಗ

ಸಂ.ಗ್ರಾ.ಪಂಹೆ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2025-26 | ದಿನಾಂಕ:-18/09/2025

**-: ದರಪಟ್ಟಿ ಪ್ರಕಟಣೆ :-**

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಬೆಳ್ಳಟ್ಟಿ ಇವರು 2025-26ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಪಾರ್ಮಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ.ಸಂ. | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ.ಗಳಲ್ಲಿ) | ಷರಾ |
|---|---|---|---|---|
| 01 | ಬೆಳ್ಳಟ್ಟಿ ಗ್ರಾಮದ ಶೇಷನಗೌಡ್ರ ಮನೆಯಿಂದ APMC ಕಂಪೌಂಡವರಿಗೆ ಸಿ ಸಿ ರಸ್ತೆ ನಿರ್ಮಾಣ | 303489.78 | 1000 | ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು |
| 02 | ಬೆಳ್ಳಟ್ಟಿ ಗ್ರಾಮದ ದೇವಮ್ಮ ಕಠಾರಿ ಇವರ ಅಂಗಡಿಯಿಂದ ಸೂರಣಗಿ ಗ್ಯಾರೇಜವರೆಗೆ ಚಂರಡಿ ನಿರ್ಮಾಣ | 176762.96 | 1000 | ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು |
| 03 | ಬೆಳ್ಳಟ್ಟಿ ಗ್ರಾಮದ ವಾರ್ಡ ನಂ 6ರಲ್ಲಿ ಈರಪ್ಪ ಬಡಿಗೇರ ಇವರ ಮನೆಯಿಂದ ತೊಟ್ಟಿಲಬಾವಿಯವರಿಗೆ ಸಿ ಸಿ | 395456.37 | 1000 | ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು |
| 04 | ಬೆಳ್ಳಟ್ಟಿ ಗ್ರಾಮದ ಉರ್ದು ಶಾಲೆಯಲ್ಲಿ ಕಂಪೌಂಡ ನಿರ್ಮಾಣ | 416130.43 | 1000 | ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು |

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ಸ್ವೀಕರಿಸುವ ದಿನಾಂಕ : 19/09/2025 ರಿಂದ 26/09/2025 ರವರೆಗೆ ಭರ್ತಿ ಮಾಡಿ ದರಪಟ್ಟಿ ಫಾರಂ ಸಲ್ಲಿಸುವ ದಿನಾಂಕ: 26/09/2025, ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ: 26/09/2025 ಮುಂಜಾನೆ 10.00 ಗಂಟೆಯಿಂದ ಮಧ್ಯಾಹ್ನ 2.00 ಗಂಟೆವರೆಗೆ. ತೆರೆಯುವ ದಿನಾಂಕ ಹಾಗೂ ಸಮಯ:-26/09/2025/ ರ ಬೆಳಿಗ್ಗೆ 11.00 ಗಂಟೆ

**ನಿಬಂಧನೆಗಳು**

1) ಷರತ್ತು/ ನಿಬಂಧನೆಗಳಿಗೆ, ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಹಾಗೂ ರಜಾ ದಿನಗಳನ್ನು ಹೊರತುಪಡಿಸಿ ಗ್ರಾಮ ಪಂಚಾಯತ ಬೆಳ್ಳಟ್ಟಿ ಯಿಂದ ಮಾಹಿತಿ ಪಡೆಯಬಹುದಾಗಿದೆ.

**ಸಹಿ ಆಗಿದೆ/-**
**ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು**
**ಗ್ರಾಮ ಪಂಚಾಯತಿ ಬೆಳ್ಳಟ್ಟಿ**

**ಸಹಿ ಆಗಿದೆ/-**
**ಅಧ್ಯಕ್ಷರು,**
**ಗ್ರಾಮ ಪಂಚಾಯತಿ ಬೆಳ್ಳಟ್ಟಿ**

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka